ಸಂಪುಟ : 10 ಸಂಚಿಕೆ: 179 ಪುಟ : 4+2 ಬೆಲೆ: 3.00 ಶುಕ್ರವಾರ ಆಗಸ್ಟ್ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 179 Pages : 4+2 Price : 3.00 Friday August 22 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಿಂದ ಪ್ರಗತಿ ಪರಿಶೀಲನೆ । ಕೆ.ನಾಗಣ್ಣಗೌಡ ಸೂಚನೆ

# ಮಕ್ಕಳ ರಕ್ಷಣೆ, ಆರೋಗ್ಯದೆಡೆ ಗಮನ ಹರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ವರ್ಷ 518 ಗರ್ಭಿಣಿಯರು ಅಮೆನಿಯಾ ಕೊರತೆಯಿಂದ ಬಳಲುತ್ತಿದ್ದಾರೆ. ಆರೋಗ್ಯ ಜಾಗೃತಿ ಮೂಡಿಸದಿರುವುದೇ ಇದಕ್ಕೆ ಕಾರಣ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ. ನಾಗಣ್ಣಗೌಡ ವಿಷಾದ ವ್ಯಕ್ತಪಡಿಸಿದರು.

ಜಿಲ್ಲಾಡಳಿತ ಭವನದಲ್ಲಿ ಗುರುವಾರ ಜರುಗಿದ ಜಿಲ್ಲೆಯಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ-ಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಕ್ಕಳು ಹಾಗೂ ಪರಿಸರ ಈ ದೇಶದ ಸಂಪತ್ತು. ಇವುಗಳ ಆರೋಗ್ಯದ ಬಗ್ಗೆ ನಾವೆಲ್ಲರೂ ಕಾಳಜಿ ವಹಿಸೋಣ. ಎಲ್ಲ ಸರ್ಕಾರಿ ಕಟ್ಟಡ ಮೇಲೆ ಮಕ್ಕಳ ರಕ್ಷಣಾ ಸಹಾಯವಾಣಿ ಸಂಖ್ಯೆ-1098 ಬರೆಸಲೇಬೇಕು. ಹೊರ ರೋಗಿಗಳ ಚೀಟಿ, ಸರ್ಕಾರಿ ಎಲ್ಲ ದಾಖಲೆಗಳ ಕೆಳಗೆ ಬಾಲ್ಯ ವಿವಾಹ ಅಪರಾಧ ಎಂದು ಬರೆಸಲೇಬೇಕು ಎಂದು ಹೇಳಿದರು.

ಕಳೆದ 3 ವರ್ಷದಲ್ಲಿ 110ಕ್ಕೂ ಅಧಿಕ ಪೋಕ್ಸೊ ಪ್ರಕರಣಗಳು ದಾಖಲಾಗಿವೆ. 2021 ಮತ್ತು 22ರಲ್ಲಿ 12 ಪ್ರಕರಣಗಳಲ್ಲಿ ಶಿಕ್ಷೆ ಆಗಿದೆ. ಮಕ್ಕಳ ಕಳ್ಳತನಕ್ಕೆ ಸಂಬಂಧಿಸಿದಂತೆ 2023-24 ಹಾಗೂ 2025ರಲ್ಲಿ 43 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಒಂದು ಮಗು ಪತ್ತೆ ಆಗಿಲ್ಲ ಎಂದು ಪೊಲೀಸ್ ಅಧಿಕಾರಿಗಳು ಮಾಹಿತಿ ನೀಡಿದಾಗ, ಪತ್ತೆ ಆಗದ ಮಗುವಿನ ಕುರಿತು ಆಯೋಗಕ್ಕೆ ವರದಿ ನೀಡುವಂತೆ ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೊಸಂಬಿ ಮಾತನಾಡಿ, ಮಕ್ಕಳ ರಕ್ಷಣೆಯಲ್ಲಿ ಹಲವು ಸಮಸ್ಯೆಗಳು ಎದುರಾಗುತ್ತವೆ. ಅವುಗಳನ್ನು ಸಮರ್ಥವಾಗಿ ನಿಭಾಯಿಸಬೇಕು ಎಂದು ಹೇಳಿದರು.



ಕಳೆದ 5 ವರ್ಷದಲ್ಲಿ 1176 ಬಾಲಕಿಯರು ಗರ್ಭಿಣಿ ಆಗಿದ್ದಾರೆ. ಈ ಬಗ್ಗೆ ಆರೋಗ್ಯ ಇಲಾಖೆಯವರು ಪೊಲೀಸ್ ಇಲಾಖೆಗೆ ಮಾಹಿತಿ ನೀಡಿಲ್ಲ. ಕಾನೂನು ಕ್ರಮ ಏಕೆ ಕೈಗೊಂಡಿಲ್ಲ ಎಂದು ಅಧ್ಯಕ್ಷರು ಪ್ರಶ್ನಿಸಿದರಲ್ಲದೆ, ಆರೋಗ್ಯ ಇಲಾಖೆಯ ಆರ್‌ಸಿಎಚ್ ಅಧಿಕಾರಿಗಳು ಸರಿಯಾಗಿ ತಮ್ಮ ಕರ್ತವ್ಯ ನಿಭಾಯಿಸಿಲ್ಲ. ಬಾಲ ವಿವಾಹ, ಬಾಲ ಗರ್ಭಿಣಿ, ಟೀನೇಜ್ ಗರ್ಭಿಣಿ ಬಗ್ಗೆ ಸಭೆಗೆ ಸರಿಯಾಗಿ ಮಾಹಿತಿಯೊಂದಿಗೆ ಆಗಮಿಸಬೇಕು ಎಂದು ಸೂಚಿಸಿದರು.

ಗ್ರಾಮಗಳಲ್ಲಿ ವಿಕಲಚೇತನ ಮಕ್ಕಳಿಗೆ ಇಲಾಖೆಯಿಂದ ಕಾರ್ಡ್ ಸಿಕ್ಕಿಲ್ಲ. ಪೋಷಕರಿಗೆ ಮಾಹಿತಿ ಕೊರತೆಯಿಂದ ಇಲಾಖೆ ಸೌಲಭ್ಯ ಪಡೆಯುವ ಕಾರ್ಡ್ ಸಿಗುತ್ತಿಲ್ಲ ಎಂದು ಆಯೋಗದ ಸದಸ್ಯ ಡಾ. ಕೆ.ಟಿ. ತಿಪ್ಪೆಸ್ವಾಮಿ 'ಸಮಾಧಾನ ವ್ಯಕ್ತಪಡಿಸಿದರು.

ಖಾಸಗಿ ಶಾಲಾ ವಾಹನಗಳಲ್ಲಿ ಸಿಸಿ ಕ್ಯಾಮರಾ, ಜಿಪಿಎಸ್ ಟ್ರ್ಯಾಕರ್ ಹಾಗೂ ಚಾಲಕನ ಮಾಹಿತಿ ಕುರಿತು ಪೊಲೀಸ್ ವೆರಿಫಿಕೇಷನ್ ಮಾಡಿರುವ ದಾಖಲೆಗಳನ್ನು ಹೊಂದಿರಬೇಕು. ಶಾಲೆಗಳಲ್ಲಿ ಹೊರಗುತ್ತಿಗೆ ಸಿಬ್ಬಂದಿಯ ಪೊಲೀಸ್ ವೆರಿಫಿಕೇಷನ್ ಆಗಬೇಕು. ಆದರೆ ಇವೆಲ್ಲವೂ ಖಾಸಗಿ ಶಾಲಾ ವಾಹನಗಳಲ್ಲಿ ಕಂಡು ಬಂದಿಲ್ಲ ಎಂದು ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಆರೋಪಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಆಯೋಗವು ಈಗಾಗಲೇ ಹಲವು ಜಿಲ್ಲೆಗಳಲ್ಲಿ ಸಭೆ ನಡೆಸಿದೆ. ಅಲ್ಲಿನ ಅನುಭವಗಳು, ಸಮಸ್ಯೆಗಳು ಹಾಗೂ ನಿವಾರಣೆ ಹೇಗೆ ಎಂದು ವಿವರವಾಗಿ ತಿಳಿಸಿದ್ದಾರೆ. ಗದಗ ಜಿಲ್ಲೆಯಲ್ಲಿ ಆಯೋಗದ ಸೂಚನೆಯಂತೆ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಾರೆ ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಜಾಗೃತಿ ಕತಪತ್ರ, ನೂತನ ಲೋಗೊ ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಆಯೋಗದ ಸದಸ್ಯರಾದ ಶಶಿಧರ ಕೊಸಂಬಿ, ಶೇಖರಗೌಡ ರಾಮತ್ನಾಳ, ಡಾ. ಕೆ.ಟಿ. ತಿಪ್ಪೇಸ್ವಾಮಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಿವೈಎಸ್ಪಿ ಮಹಾಂತೇಶ ಸಜ್ಜನರ, ಜಯದೇವಿ ಮುಂತಾದವರು ಇದ್ದರು.

ಮುಂಡರಗಿ ತಾಲೂಕಿನ ಹೈತಾಪುರ ಗ್ರಾಮದಲ್ಲಿ ಕೃಷಿ ಹೊಂಡದಲ್ಲಿ 5 ವರ್ಷದ ಮಗುವಿನೊಂದಿಗೆ ತಾಯಿ ಬಿದ್ದು ಸಾವನ್ನಪ್ಪಿದ ಕುರಿತು ಚರ್ಚಿಸಲಾಯಿತು. ಕೃಷಿಹೊಂಡದ ಸುತ್ತಲೂ ರಕ್ಷಣಾ ಬೇಲಿ ಹಾಕಲು ಸರ್ಕಾರ ಆದೇಶ ನೀಡಿದೆ. ಈ ಆದೇಶವನ್ನು ಇಲಾಖೆ ಕಡ್ಡಾಯವಾಗಿ ಪಾಲಿಸಬೇಕು ಎಂದು ಆಯೋಗ ನಿರ್ದೇಶನ ನೀಡಿತು. ಕಳೆದ 5 ವರ್ಷದಿಂದ ಜಿಲ್ಲೆಯಲ್ಲಿ ಮಕ್ಕಳ ಅಸಹಜ ಸಾವು ಸಂಭವಿಸಿರುವ ಮಾಹಿತಿ ನೀಡಬೇಕು ಎಂದು ಆಯೋಗ ಒತ್ತಾಯಿಸಿತು. ಅಂಗನವಾಡಿ, ಶಾಲಾ ಸಮೀಪದಲ್ಲಿ ವಿದ್ಯುತ್ ತಂತಿ, ಹೈಟೆನ್ಷನ್ ಸಂಪರ್ಕ ಇರುವ ಬಗ್ಗೆ ವರದಿ ಸಿದ್ಧಪಡಿಸಿ ಇಲಾಖೆಗೆ ಸಲ್ಲಿಸಬೇಕು ಮತ್ತು ತೆರವುಗೊಳಿಸಬೇಕು ಎಂದು ಅಧ್ಯಕ್ಷ ಕೆ.ನಾಗಣ್ಣಗೌಡ ನಿರ್ದೇಶಿಸಿದರು.



## ಧರ್ಮಸ್ಥಳದ ಮೇಲಿನ ಅಪಪ್ರಚಾರ ಖಂಡನೀಯ

■ವಿಜಯಸಾಕ್ಷಿ ಸುದ್ದಿ, ಗದಗ



ಶ್ರೀಕ್ಷೇತ್ರ ಧರ್ಮಸ್ಥಳದ ಮೇಲೆ ನಡೆಯುತ್ತಿರುವ ಅಪಪ್ರಚಾರವನ್ನು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಧರ್ಮಸ್ಥಳದ ವಿರುದ್ಧ ಕೆಲ ದಿನಗಳಿಂದ ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಅನಾಮಧೇಯ ವ್ಯಕ್ತಿಯೊಬ್ಬ ಇಲ್ಲಸಲ್ಲದ ಆರೋಪ ಮಾಡಿದ್ದಾರೆ. ಅನಾಮಧೇಯನ ಹೇಳಿಕೆಯಂತೆ ಅಸ್ತಿಪಂಜರ ಶೋಧನೆಗಾಗಿ ಭೂಮಿ ಅಗೆದು ಅಲ್ಲಿ ಯಾವುದೇ ಕಳೆಬರ ಪತ್ತೆ ಆಗದೇ ಆರೋಪ ಸುಳ್ಳಾಗಿದೆ. ಧರ್ಮಸ್ಥಳದ ಮೇಲೆ ಆಗುತ್ತಿರುವ ಅಪಪ್ರಚಾರದಿಂದ ನಾಡಿನ ಎಲ್ಲ ಭಕ್ತಾದಿಗಳ ಮನಸ್ಸಿಗೆ ನೋವು ಹಾಗೂ ಆಘಾತ ಉಂಟಾಗಿದೆ.

ಇದರ ಹಿಂದೆ ಯಾವ ವ್ಯಕ್ತಿ ಅಥವಾ ಸಂಘಟನೆಯ ಕೈವಾಡವಿದೆ ಎಂಬುದನ್ನು ಬಹಿರಂಗಪಡಿಸಬೇಕು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ಮಾಡಿದವರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಈ ಹಿನ್ನೆಲೆಯಲ್ಲಿ ಆಗಸ್ಟ್ 22ರ ಬೆಳಿಗ್ಗೆ 10.30 ಗಂಟೆಗೆ ನಗರದ ಗಾಂಧಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ಜರುಗಲಿದೆ. ಕಾರಣ ಸಾರ್ವಜನಿಕರು, ಶ್ರೀ ಮಂಜುನಾಥ ಸ್ವಾಮಿಯ ಸಮಸ್ತ ಸದ್ಭಕ್ತರು ಪಾಲ್ಗೊಳಬೇಕೆಂದು ಅವರು ವಿನಂತಿಸಿದ್ದಾರೆ.

### ಜಿಲ್ಲೆಯ ವಿವಿಧೆಡೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಸಂಚಾರ

# ಸೌಲಭ್ಯಗಳ ಸದ್ಬಳಕೆಯಾಗದಿದ್ದರೆ ಪ್ರಯೋಜನವೇನು?

■ವಿಜಯಸಾಕ್ಷಿ ಸುದ್ದಿ, ಗದಗ

ಸಚಿವ ಎಚ್.ಕೆ. ಪಾಟೀಲರು ಗದಗ ಜಿಲ್ಲೆಗೆ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸಿದ್ದಾರೆ. ಆದರೆ ಅವುಗಳನ್ನು ಸರಿಯಾಗಿ ಬಳಕೆ ಮಾಡದಿದ್ದರೆ ಏನು ಪ್ರಯೋಜನವೇನು? ಬಾಣಂತಿ, ನವಜಾತ ಶಿಶುವಿಗೆ ಶುದ್ಧ ಗಾಳಿ ಬೆಳಕಿನ ವ್ಯವಸ್ಥೆ ಬೇಡವೇ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೊಸಂಬೆ ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಗುರುವಾರ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕ್ಕಮಕ್ಕಳ ವಿಭಾಗದ ತೀವ್ರ ನಿಗಾ ಘಟಕ, ಮಹಿಳೆಯರು ಮತ್ತು ಮಕ್ಕಳ ವಾರ್ಡ್‌ಗಳಿಗೆ ಭೇಟಿ ನೀಡಿದ ಅವರು, ಬಾಣಂತಿ ಮತ್ತು ಮಕ್ಕಳ ವಾರ್ಡ್‌ಗಳಿಗೆ ಶುದ್ಧ ಗಾಳಿ ಬೆಳಕಿನ ವ್ಯವಸ್ಥೆ ಇಲ್ಲ. ಎಸಿ ಅಳವಡಿಸಿದ್ದರೂ ಅವು ಸುಸ್ಥಿತಿಯಲ್ಲಿಲ್ಲವೇಕೆ ಎಂದು ಪ್ರಶ್ನಿಸಿದರು.

ಗದಗ ತಾಲೂಕಿನ ನಾಗಾವಿ ಗ್ರಾಮದ ಪ್ರೌಢಶಾಲೆಗೆ ಭೇಟಿ ನೀಡಿದ ಆಯೋಗ, ಬಿಸಿಯೂಟಕ್ಕೆ ತೊಗರಿಬೇಳೆ ಕೊರತೆ ಮತ್ತು ಕಳಪೆ ಬೇಳೆ ಕಂಡು ಅಸಮಾಧಾನ ವ್ಯಕ್ತಪಡಿಸಿತು. ಮುಳಗುಂದ ಪೊಲೀಸ್ ಠಾಣೆಗೆ ಭೇಟಿ ನೀಡಿ, ಮಕ್ಕಳ ವಿಶೇಷ ಪೊಲೀಸ್ ಘಟಕದ ಕಾರ್ಯವೈಖರಿ ಪರಿಶೀಲಿಸಿತು. ಮಕ್ಕಳ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ರಿಜಿಸ್ಟರ್ ನಿರ್ವಹಿಸಬೇಕು. ಮಕ್ಕಳ ಪೊಲೀಸ್ ಕಲ್ಯಾಣ ಅಧಿಕಾರಿ ಸಹಿ ಮಾಡಿರಬೇಕು ಎಂದು ಸೂಚನೆ ನೀಡಿತು. ನಂತರ ಅಸುಂಡಿ ಗ್ರಾಮ ಪಂಚಾಯಿತಿಗೆ ಭೇಟಿ ಮಾಹಿತಿ ಸಂಗ್ರಹಿಸಿತು.



ಜಿಲ್ಲಾ ಆಸ್ಪತ್ರೆಯ ಪ್ರತಿಯೊಂದು ವಾರ್ಡ್‌ಗೂ ಭೇಟಿ ನೀಡಿದ ಆಯೋಗದ ಅಧ್ಯಕ್ಷ ಕೆ. ನಾಗಣ್ಣಗೌಡ ಮತ್ತು ಸದಸ್ಯರಾದ ಶೇಖರಗೌಡ ರಾಮತ್ನಾಳ, ಡಾ. ತಿಪ್ಪೇಸ್ವಾಮಿ ಕೆ.ಟಿ, ಮಹಿಳೆ ಮತ್ತು ಮಕ್ಕಳಿಗೆ ನೀಡಲಾಗುತ್ತಿರುವ ಆಹಾರದ ಗುಣಮಟ್ಟ ಪರಿಶೀಲಿಸಿದರು. ಒಳರೋಗಿಗಳನ್ನು ಮಾತನಾಡಿಸಿ ಅಭಿಪ್ರಾಯ ಸಂಗ್ರಹಿಸಿದರು. ಮಕ್ಕಳಿಗೆ ನೀಡಲಾಗುತ್ತಿರುವ ಚಿಕಿತ್ಸೆ ಬಗ್ಗೆ ಮಾಹಿತಿ ಪಡೆದುಕೊಂಡರು.

ಜಿಮ್ಸ್ ಭೇಟಿಗೂ ಮೊದಲು ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗೆ ಭೇಟಿ ನೀಡಿದ ಆಯೋಗ, ತಪ್ಪು ಮಾಹಿತಿ ನೀಡಿದ ಪ್ರಾಚಾರ್ಯರ ವಿರುದ್ಧ ಕ್ರಮ ಕೈಗೊಳ್ಳಲು ಸೂಚಿಸಿತು. ಆಯೋಗದ ಸೂಚನೆ ಮೇರೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಗಳು ಪ್ರಾಚಾರ್ಯೆ ಮಂಜುಳಾ ಆರಿಕಟ್ಟಿ ಅವರಿಗೆ ಶೋಕಾಸ್ ನೋಟಿಸ್ ಜಾರಿ ಮಾಡಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಮಹಾವಿದ್ಯಾಲಯದ ಹಾಸ್ಟೆಲ್ ಅವ್ಯವಸ್ಥೆ ಕಂಡು ಅಸಮಾಧಾನ ವ್ಯಕ್ತಪಡಿಸಿದ ಆಯೋಗ, ತಕ್ಷಣ ವಾರ್ಡನ್‌ರ ಅಮಾನತಿಗೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿತು.

## ಸೆ. 28 ರಂದು ಅಂಜುಮನ್ ಕಮಿಟಿ ಚುನಾವಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯ ಅಂಜುಮನ್ ಕಮಿಟಿ ಪದಾಧಿಕಾರಿಗಳ ಆಯ್ಕೆಗೆ ಸೆಪ್ಟೆಂಬರ್ 28ರಂದು ಚುನಾವಣೆ ನಡೆಯಲಿದೆ ಎಂದು ಚುನಾವಣಾ ಅಧಿಕಾರಿ ತೌಸಿಫ್ ಅಹ್ಮದ ಮಕಾನದಾರ್ ತಿಳಿಸಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಟ್ಟು 6195 ಜನ ನೋಂದಣಿ ಮಾಡಿಕೊಂಡಿದ್ದು, ಈಗಾಗಲೇ ಚುನಾವಣೆ ಪ್ರಕ್ರಿಯೆ ಪ್ರಾರಂಭವಾಗಿದೆ. ಸೆಪ್ಟೆಂಬರ್ 1 ರಂದು ಅಧಿಸೂಚನೆ ಹೊರಡಿಸಲಾಗುವುದು ಎಂದು ತಿಳಿಸಿದರು.

ಸೆಪ್ಟೆಂಬರ್ 8 ರಿಂದ 15 ರವರೆಗೆ ಬೆಳಗ್ಗೆ 11 ರಿಂದ ಮಧ್ಯಾಹ್ನ 2 ಗಂ-ಟೆ ವರೆಗೆ ನಾಮಪತ್ರಗಳ ಸಲ್ಲಿಕೆ, ಸೆಪ್ಟೆಂಬರ್ 16ರಂದು ನಾಮಪತ್ರಗಳ ಪರಿಶೀಲನೆ ಹಾಗೂ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ, ಸೆ. 17 ರಂದು ನಾಮಪತ್ರ ಹಿಂಪಡೆಯುವ ಮತ್ತು ಚುನಾವಣೆಗೆ ಸ್ಪರ್ಧಿಸುವ ಅಂತಿಮ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ ಹಾಗೂ ಚಿಹ್ನೆಗಳ ಹಂಚಿಕೆ ನಡೆಯಲಿದೆ.




ಸಪ್ಟಂಬರ್ 28ರಂದು ಬೆಳಗ್ಗೆ 8 ರಿಂದ ಮಧ್ಯಾಹ್ನ 4:00 ವರೆಗೆ ಮತದಾನ ನಡೆಯಲಿದೆ. ಅದೇ ದಿನ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟಿಸಲಾಗುವುದು ಎಂದು ಚುನಾವಣೆ ಅಧಿಕಾರಿ ಮಾಹಿತಿ ನೀಡಿದರು.

ನಾಮಪತ್ರ ಸಲ್ಲಿಕೆ, ಪರಿಶೀಲನೆ, ಮತ್ತು ಚಿಹ್ನೆಗಳ ಹಂಚಿಕೆ ಸಹಿತ ಎಲ್ಲ ಪ್ರಕ್ರಿಯೆ ಜಿಲ್ಲಾ ವಕ್ಫ್ ಬೋರ್ಡ್ ಕಚೇರಿಯಲ್ಲಿ ನಡೆಯಲಿದೆ. ಮತದಾನ ಮತ್ತು ಮತ ಎಣಿಕೆ ಕಾರ್ಯ ಮುನ್ಸಿಪಲ್ ಕಾಲೇಜಿನಲ್ಲಿ ನಡೆಯಲಿದೆ ಎಂದು ತೌಸಿಫ್ ಅಹ್ಮದ್ ಮಕಾನದಾರ ತಿಳಿಸಿದರು.

### ಶರಣ ಚರಿತಾಮೃತ ಪ್ರವಚನ ಕಾರ್ಯಕ್ರಮದಲ್ಲಿ ಜಯ ಮೃತ್ಯುಂಜಯ ಶ್ರೀಗಳು

# ಆಧ್ಯಾತ್ಮದ ಜ್ಞಾನವು ಜೀವನೋತ್ಸಾಹಕ್ಕೆ ಸ್ಫೂರ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರಾವಣ ಮಾಸದ ಅಂಗವಾಗಿ, ಶ್ರಾವಣ ಮಾಸದಲ್ಲಿ ಒಂದು ತಿಂಗಳು ನಡೆಯುವ ಜ್ಞಾನ ದಾಸೋಹದಲ್ಲಿ ಭಾಗವಹಿಸಿ ನಮ್ಮ ಮನಸ್ಸಿನಲ್ಲಿರುವ ಅಜ್ಞಾನವನ್ನು ಕಳೆದುಕೊಳ್ಳಬೇಕೆಂದು ಕೂಡಲಸಂಗಮ ಪಂಚಮಸಾಲಿ ಪೀಠದ ಜಗದ್ಗುರುಗಳಾದ ಜಯ ಮೃತ್ಯುಂಜಯ ಸ್ವಾಮಿಗಳು ಹೇಳಿದರು.

ನಗರದ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಅಂಗವಾಗಿ ನಡೆದ ಶರಣ ಚರಿತಾಮೃತ ಪ್ರವಚನದಲ್ಲಿ ಭಾಗವಹಿಸಿ ಮಾತನಾಡಿದ ಶ್ರೀಗಳು, ಒಕ್ಕಲಗೇರಿ ಓಣಿಯ ಜನರು ಕೃಷಿಕರು. ಇಲ್ಲಿಯ ಜನರು ಕೃಷಿಯ ಮೇಲೆ ಅವಲಂಬಿತರಾಗಿದ್ದು, ಒಳ್ಳೆಯ ಸಂಸ್ಕಾರವಂತರಾಗಿದ್ದಾರೆ. ಲಿಂಗಾಯತರಿಗೆ ಶ್ರಾವಣ ಮಾಸ ಶ್ರೇಷ್ಠವಾದ ಮಾಸವಾಗಿದೆ. ಶ್ರಾವಣ ಮಾಸದಲ್ಲಿ ಮನೆಯಲ್ಲಿಯೇ ಕುಳಿತು ಸಮಯ ಹಾಳು ಮಾಡದೇ ಮಠ-ಮಂದಿರದಲ್ಲಿ ನಡೆಯುತ್ತಿರುವ ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಿ ಜ್ಞಾನ ದಾಸೋಹವನ್ನು ಪಡೆದುಕೊಳ್ಳಬೇಕು ಎಂದರು.



ಪಂಚಾಕ್ಷರಪ್ಪ ಅಂಗಡಿ ಸ್ವಾಗತಿಸಿದರು. ಎಮ್.ಎಮ್. ಹಿರೇಮಠ ನಿರೂಪಿಸಿದರು. ವೇದಿಕೆಯ ಮೇಲೆ ಪಂಚಮಸಾಲಿ ಸಮಾಜದ ಜಿಲ್ಲಾ ಅಧ್ಯಕ್ಷ ಈರಣ್ಣ ಕರಬಿಷ್ಟಿ, ಅಯ್ಯಪ್ಪ ಅಂಗಡಿ ಇದ್ದರು.

ಈ ಸಂದರ್ಭದಲ್ಲಿ ಟ್ರಸ್ಟ್ ಕಮಿಟಿ ಸದಸ್ಯರಾದ ಕೊಟ್ರಪ್ಪ ಕಮತರ, ಎಂ.ಎಂ. ಹಿರೇಮಠ ವಕೀಲರು, ಶಿವಣ್ಣ ಕತ್ತಿ, ಮುರಿಗೆಪ್ಪ ನಾಲವಾಡ, ಹಿರಿಯರಾದ ವಿರೂಪಾಕ್ಷಪ್ಪ ಅಕ್ಕಿ, ಬಸವರಾಜ ಜಂತ್ಲಿ, ಬಸವರಾಜ ಮಡಿವಾಳರ, ಪುರಾಣ ಪ್ರವಚನ ಸಮಿತಿ ಅಧ್ಯಕ್ಷ ಶೇಖಪ್ಪ ಹೊಂಬಳ, ಸಿದ್ದಣ್ಣ ಅರಳಿ, ಗಂಗಾಧರ ಮೇಲಗಿರಿ, ಗಂಗಾಧರ ನಂದಿಕೋಲಮಠ, ಶ್ರಿಶೈಲಪ್ಪ ಪಟ್ಟಣಶೆಟ್ಟಿ, ಸುರೇಶ ಮಾಳವಾಡ, ಪ್ರಭು ಶೆಟ್ಟರ, ಸುಭಾಸ ಹವಳೆ, ವಿರೂಪಾಕ್ಷಪ್ಪ ಅಂಗಡಿ, ಮಲ್ಲಿಕಾರ್ಜುನ ಹಿರೇಮಠ, ಶಂಕರ ನೀರಲಕೇರಿ, ಸುರೇಶ ನಿಲುಗಲ್ಲ, ಅಶೋಕ ತಮ್ಮಳ್ಳಿ, ಬಸವರಾಜ ಮೊರಬದ, ಪಂಚಾಕ್ಷರ ಅಂಗಡಿ, ನವೀನ ನಾಲ್ವಾಡ, ಬಸವರಾಜ ಜ್ಞಾಂಪೂರ, ಪ್ರಕಾಶ ಜಂತ್ಲಿ, ಸತ್ಸಂಗದ ಸದಸ್ಯರಾದ ಸುನಂದಾ ಜೋಬಾಳೆ, ಬೀನಾ ಮಾನ್ವಿ, ಉಮಾ ಪಟ್ಟಣಶೆಟ್ಟಿ, ಜಯಶ್ರೀ ನಿಲೂಗಲ್, ನಗಪ್ಪ ಕಟಿಗೆರೆ, ಕಸ್ತೂರಕ್ಕ ಮಾನ್ವಿ, ಶರಣಮ್ಮ ಶಿರೂರ, ಸುಶೀಲಾ ನಿಲೂಗಲ್ಲ, ನೀಲಕ್ಕ ಕಗನಳ್ಳಿ, ಅನಸಕ್ಕ ಮೇಲಗಿರಿ, ಶೈಲಾ ಮಾನ್ವಿ ಮುತಾದವರು ಭಾಗವಹಿಸಿದ್ದರು.

ನೀಲಮ್ಮತಾಯಿಯವರು ಪ್ರವಚನ ನೀಡಿ, 12ನೇ ಶತಮಾನದಲ್ಲಿ ಆಗಿಹೋದ ಶರಣ ಸಿದ್ದರಾಮಯ್ಯನವರು ಅಲ್ಲಮ ಪ್ರಭುಗಳ ನಡುವೆ ನಡೆದ ಸಂವಾದದ ಬಗ್ಗೆ ವಿವರಿಸಿದರು. ಸಂಗೀತ ಸೇವೆಯನ್ನು ಮೃತ್ಯುಂಜಯ ಹಿರೇಮಠ ನಡೆಸಿದರು. ತಬಲಾ ವಾದಕರಾಗಿ ಹೇಮೇಂದ್ರಕುಮಾರ ಹಿರೇಮಠ ಸೇವೆ ಸಲ್ಲಿಸಿದರು. ಪ್ರಸಾದದ ಸೇವೆಯನ್ನು ಕಿರಣ ವಿಶ್ವನಾಥ ಕರೂಗಲ್ಲ ಹಾಗೂ ಕುಟುಂಬದವರು ವಹಿಸಿದ್ದರು.

## ಅಮೃತ ಭೋಜನ ಪುಣ್ಯದ ಕೆಲಸ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರಾವಣ ಮಾಸದಲ್ಲಿ ಒಂದು ತಿಂಗಳ ಪರ್ಯಂತ ಮಕ್ಕಳಿಗೆ ಸಿಹಿಯೂಟ ಮಾಡಿಸುವುದು ಸುಲಭದ ಕೆಲಸವೇನಲ್ಲ. ಹಾಗೆಂದು ಸುಮ್ಮನಾಗದೆ ದಾನಿಗಳನ್ನು ಹುಡುಕಿ ಪ್ರತಿ ವರ್ಷವೂ ಮಕ್ಕಳಿಗೆ ಅಮೃತ ಭೋಜನ ಮಾಡಿಸುತ್ತಿರುವುದು ಪುಣ್ಯದ ಕೆಲಸ ಎಂದು ಹಿರೆಅಳಗುಂಡಿಯ ಚನ್ನು ಪಾಟೀಲ ಫೌಂಡೇಷನ್ ಸಂಸ್ಥಾಪಕ ಕಾರ್ಯದರ್ಶಿ ಉಮೇಶ ಪಾಟೀಲ ಹೇಳಿದರು. ಪಟ್ಟಣದ ಕೆಜಿಎಂಎಸ್ ಶಾಲೆಯಲ್ಲಿ ಬುಧವಾರ ಮಕ್ಕಳಿಗೆ ಸಿಹಿ ಊಟವನ್ನು ಬಡಿಸಿ ಮಾತನಾಡಿದರು. ಕಳೆದ ನಾಲ್ಕೈದು ವರ್ಷಗಳಿಂದ ಈ ಕಾರ್ಯವನ್ನು ಇಲ್ಲಿಯ ಶಿಕ್ಷಕ ಬಳಗ ಮಾಡುತ್ತ ಬಂದಿರುವುದನ್ನು ತಿಳಿದು ಅತೀವ ಸಂತಸವಾಯಿತು. ಇಲ್ಲಿನ ಶಿಕ್ಷಕರ ಪರಿಶ್ರಮ ಖಾಸಗಿ ಶಾಲೆಗಳಿಗೆ ಸೆಡ್ಡು ಹೊಡೆಯುವಂತಿರುವುದನ್ನು ಕಂಡು ಹೆಮ್ಮೆಯೆನಿಸಿತು. ಈ ಸೇವೆ ಪ್ರತಿ ವರ್ಷವೂ ಹೀಗೆಯೇ ನಿರಂತರವಾಗಿ ನಡೆಯಲಿ ಎಂದು ಆಶಿಸಿದರು. ಮುಖ್ಯ ಶಿಕ್ಷಕ ಬಿ.ಬಿ. ಕುರಿ ಉಮೇಶ ಪಾಟೀಲ ಮತ್ತು ಪರಿವಾರವನ್ನು ಸ್ವಾಗತಿಸಿ, ಶಾಲೆಯ ಎಲ್ಲ ಪ್ರಗತಿಯ ಹಂತಗಳನ್ನು ತೋರಿಸಿದರು. ಉಮೇಶ ಪಾಟೀಲರೊಂದಿಗೆ ರಮೇಶ ಕೋಲಕಾರ, ಬಸವರಾಜ ಜುಚನಿ, ಮಹೇಶ ಶಿವಶಿಂಪ್ರ, ಇಸ್ಮಾಯಿಲ್ ಮುದಗಲ್ಲ ಮತ್ತು ಶಾಲಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಚಿತ್ರಕಲಾ ಸ್ಪರ್ಧೆಯಲ್ಲಿ ತೃತೀಯ ಸ್ಥಾನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಹೂವಿನ ಹಡಗಲಿಯಲ್ಲಿ ನಡೆದ ರಾಜ್ಯಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ಪಟ್ಟಣದ ಶ್ರೀ ಜಗದ್ಗುರು ಪಂಚಾಚಾರ್ಯ ಗ್ರಾಮೀಣ ಶಿಕ್ಷಣ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಚೈತ್ರಾ ಅಳೆಹೊನ್ನಪ್ಪನವರ ತೃತೀಯ ಸ್ಥಾನ ಪಡೆದು ಪಟ್ಟಣಕ್ಕೆ ಕೀರ್ತಿ ತಂದಿದ್ದಾಳೆ ಎಂದು ಮುಖ್ಯ ಶಿಕ್ಷಕಿ ನಿರ್ಮಲಾ ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೂವಿನ ಹಡಗಲಿಯ ಕರ್ನಾಟಕ ರಾಜ್ಯ ಬರಹಗಾರರ ಸಾಹಿತ್ಯ, ಸಂಸ್ಕೃತಿ, ಸಾಹಿತಿಗಳ ವೇದಿಕೆಯು ಸ್ವಾತಂತ್ರ್ಯ ದಿನೋತ್ಸವದ ನೆನಪಿಗಾಗಿ ಆ. 17ರಂದು ವಿವಿಧ ಚಟುವಟಿಕೆ, ಚಿತ್ರಕಲೆ, ಸಾಹಿತ್ಯ, ಸಾಂಸ್ಕೃತಿಕ ಕಲೆಗಳ ಸ್ಪರ್ಧೆ ಏರ್ಪಡಿಸಿದ್ದರು. ಈ ಸಂಘಟನೆಯ ರಾಜ್ಯಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ್ದ 7ನೇ ತರಗತಿಯ ಚೈತ್ರಾ ಅಳೆಹೊನ್ನಪ್ಪನವರ ತೃತೀಯ ಸ್ಥಾನ ಪಡೆದಿದ್ದಾಳೆ. ಸಂಸ್ಥೆಯ ಅಧ್ಯಕ್ಷರಾದ ಷ. ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು, ಕಾರ್ಯದರ್ಶಿ, ಸರ್ವ ಸದಸ್ಯರು, ಶಿಕ್ಷಕ ವೃಂದ ವಿದ್ಯಾರ್ಥಿನಿಯ ಸಾಧನೆಗೆ ಶುಭ ಹಾರೈಸಿದ್ದಾರೆ.

### ಸಾವಿತ್ರವ್ವ ಹಟ್ಟಿ ಅವರ 'ಭಾಮಿನಿ ಕೀರ್ತನೆಗಳು' ಪುಸ್ತಕ ಲೋಕಾರ್ಪಣೆಗೊಳಿಸಿದ ಪ್ರೊ. ಚಂದ್ರಶೇಖರ ವಸ್ತ್ರದ

# ಹಳಗನ್ನಡ ಕಾವ್ಯದಲ್ಲಿ ಆಸಕ್ತಿ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ರೂಪಕ, ಲಯ, ಗತಿಯಿಂದ ಸಮೃದ್ಧವಾಗಿರುವ ಹಳಗನ್ನಡ ಕಾವ್ಯ ಓದುಗನಲ್ಲಿ ಕಾವ್ಯಾನುಭೂತಿಯನ್ನು ಒದಗಿಸುತ್ತದೆ. ರಾಘವಾಂಕ ಷಟ್ಪದಿಯಲ್ಲಿ ಕಾವ್ಯ ರಚಿಸಿ ಮುಂದಿನ ಕವಿಗಳಿಗೆ ದಾರಿ ತೋರಿದನು. ನಾಡಿನ ಶ್ರೇಷ್ಠ ಕವಿಗಳೆಲ್ಲರೂ ಹಳಗನ್ನಡ ಕವಿಗಳಿಂದ ಪ್ರಭಾವಿತರಾಗಿದ್ದಾರೆ. ಈ ಕುರಿತು ಇಂದಿನ ಪೀಳಿಗೆಯಲ್ಲಿ ಆಸಕ್ತಿಯನ್ನು ಹುಟ್ಟಿಸುವ ಕಾರ್ಯ ನಡೆಯಬೇಕಿದೆ ಎಂದು ಹಿರಿಯ ಸಾಹಿತಿ ಪ್ರೊ. ಚಂದ್ರಶೇಖರ ವಸ್ತ್ರದ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜರುಗಿದ ಕಾರ್ಯಕ್ರಮದಲ್ಲಿ ಸಾವಿತ್ರವ್ವ ಹಟ್ಟಿ ರಚಿಸಿದ 'ಭಾಮಿನಿ ಕೀರ್ತನೆಗಳು' ಪುಸ್ತಕವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಸಾವಿತ್ರಮ್ಮ ಹಟ್ಟಿ ಅವರು ಷಟ್ಪದಿ ಶೈಲಿಯಲ್ಲಿ ಕಾವ್ಯ ರಚಿಸಿದ ಜಿಲ್ಲೆಯ ಈ ದಿನಮಾನದ ಮೊದಲ ಕವಯಿತ್ರಿಯಾಗಿದ್ದಾರೆ. ಈ ಕುರಿತು ಅಧ್ಯಯನ ಮತ್ತು ಪ್ರಯತ್ನದ ಮೂಲಕ ಇನ್ನೂ ಅನೇಕ ಕೃತಿಗಳನ್ನು ರಚಿಸಲಿ ಎಂದರು.

ಪುಸ್ತಕವನ್ನು ಪರಿಚಯಿಸಿದ ಅಕ್ಕಮಹಾದೇವಿ ಹಾರೋಗೇರಿ, ಈ ಕೃತಿಯಲ್ಲಿ 24 ಆತ್ಮಾನುಸಂಧಾನ ಹಾಗೂ ಸಾಮಾಜಿಕ ಕೀರ್ತನೆಗಳನ್ನು ಕಾಣಬಹುದು. ದೇಶಭಕ್ತಿ, ದೈವಭಕ್ತಿ, ಸಾಮಾಜಿಕ ಕಳಕಳಿ, ಸ್ತ್ರೀ ಸಂವೇದನೆಯ ಅಂಶಗಳನ್ನು ಇಲ್ಲಿಯ ಕೀರ್ತನೆಗಳು ಒಳಗೊಂಡಿವೆ ಎಂದು ತಿಳಿಸಿದರು.




ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಂಕರ ಹಡಗಲಿ ಮಾತನಾಡಿ, ಹಳಗನ್ನಡ ಕಾವ್ಯದ ಬಗ್ಗೆ ಇಂದಿನ ಪೀಳಿಗೆ ಆಸಕ್ತಿ ತೋರುತ್ತಿಲ್ಲ. ಇದಕ್ಕೆ ಮುಖ್ಯ ಕಾರಣ ಪರಿಣಾಮಕಾರಿಯಾಗಿ ಪ್ರಸ್ತುತಪಡಿಸುವ ಬೋಧಕ ವರ್ಗದ ಕೊರತೆ. ನಮ್ಮ ಕಾವ್ಯ ಪರಂಪರೆಯನ್ನು ಅರಿಯಬೇಕಾದುದು ನಮ್ಮ ಅಗತ್ಯವಾಗಬೇಕೆಂದು ತಿಳಿಸಿದರು.

ಶಶಿಕಲಾ ಪಾಟೀಲ, ಶಕುಂತಲಾ ಸಿಂಧೂರ ಮಾತನಾಡಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಪ್ರೇಮಾ ವೀರೇಶ ನಿರೂಪಿಸಿದರು. ರವಿ ದೇವರಡ್ಡಿ ವಂದಿಸಿದರು.

ಕಾರ್ಯಕ್ರಮದಲ್ಲಿ ಅನ್ನದಾನಿ ಹಿರೇಮಠ, ಬಸವರಾಜ ಗಿರಿತಿಮ್ಮಣ್ಣವರ, ರತ್ನಕ್ಕ ಪಾಟೀಲ, ಬಸವರಾಜ ಗಣಪ್ಪನವರ, ಸತೀಶ ಚನ್ನಪ್ಪಗೌಡ್ರ, ಬಿ.ಎಸ್. ಹಿಂಡಿ, ಅಮರೇಶ ರಾಂಪೂರ, ಡಿ.ಎಸ್. ಬಾಪುರಿ, ಶಕುಂತಲಾ ಗಿಡ್ನಂದಿ, ರಾಹುಲ ಗಿಡ್ನಂದಿ, ಶಶಿಕಾಂತ ಕೊರ್ಲಹಳ್ಳಿ, ಬಸವರಾಜ ವಾರಿ, ಭಾಗ್ಯಶ್ರೀ ಹುರಕಡ್ಲಿ, ಅಶೋಕ ಸತ್ಯರಡ್ಡಿ, ಸಿ.ಎಂ. ಮಾರನಬಸರಿ, ಮಹೇಶ ಶಟವಾಜಿ, ಎಸ್.ಎಂ. ಕಾತರಕಿ, ಶೇಖರಪ್ಪ ಕಳಸಾಪೂರಶೆಟ್ರ, ಬಸವರಾಜ ನೆಲಜೇರಿ, ರತ್ನಾಬಾಯಿ ಪುರಂತರ, ಸುರೇಶ ಕುಂಬಾರ, ಬಿ.ಬಿ. ಹೊಳಗುಂದಿ, ಮಾಲತಿ ಕೊಪ್ಪಳ, ಎಂ.ಸಿ. ದೊಡ್ಡಮನಿ, ರಮೇಶ ಲಮಾಣಿ, ಡಿ.ಸಿ. ಪ್ರಭಾಕರ, ಪ್ರಕಾಶ ನೋಟಗಾರ, ಶಿವಕುಮಾರ ಪತ್ರಿಮಠ, ಬಿ.ಬಿ. ಹೊಳಗುಂದಿ, ಅಶೋಕ ಸತ್ಯರಡ್ಡಿ, ಅಶೋಕ ಹಾದಿ, ಅಂದಯ್ಯ ಅರವಟಗಿಮಠ, ವಿಷ್ಣು ಹಟ್ಟಿ, ಯಲ್ಲಪ್ಪ ಹಂದ್ರಾಳ, ಕೃಷ್ಣಾ ಕಡಿಯವರ, ಬಸವರಾಜ ನೆಲಜೇರಿ, ಹೇಮಾವತಿ ಕಣವಿ, ಪ್ರಮೀಳಾ ಸವಡಿ, ಶ್ವೇತಾ ಉಪ್ಪಿನ, ರೇಣುಕಾ ದಾಸರ, ಜ್ಯೋತಿ ಎಸರಗಿ, ವಿಶ್ವನಾಥ ಗವಾಯಿ, ಎಸ್.ಯು. ಸಜ್ಜನಶೆಟ್ಟರ ಮೊದಲಾದವರು ಭಾಗವಹಿಸಿದ್ದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಪ್ರಾರಂಭದಲ್ಲಿ ಕವಿತೆ ಪ್ರೀತಿ, ಪ್ರೇಮ, ಪ್ರಣಯಗಳ ಸುತ್ತ ಸುತ್ತುವ ಈ ಸಂದರ್ಭದಲ್ಲಿ ಸಾವಿತ್ರವ್ವ ಹಟ್ಟಿ ಅವರು ಷಟ್ಪದಿಯಲ್ಲಿ ಕಾವ್ಯ ರಚಿಸುವ ಮೂಲಕ ಹೊಸ ತಲೆಮಾರಿನ ಬರಹಗಾರರಿಗೆ ಮಾದರಿಯಾಗಿದ್ದಾರೆ. ಜಿಲ್ಲೆಯ ಭರವಸೆಯ ಕವಿಯಾಗಿ ಹೊರಹೊಮ್ಮಿದ್ದಾರೆ ಎಂದು ತಿಳಿಸಿದರು.

# ಗ್ರಂಥಾಲಯಗಳು ಜ್ಞಾನದ ಆಗರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರೊ. ವೆಂಕಟ ಸುಬ್ಬಾಶೆಟ್ಟಿ ಗ್ರಂಥಾಲಯದಲ್ಲಿ ರಾಷ್ಟ್ರೀಯ ಗ್ರಂಥಪಾಲಕರ ದಿನವನ್ನು ಆಚರಿಸಲಾಯಿತು.

ಭಾರತದ ಗ್ರಂಥಾಲಯ ವಿಜ್ಞಾನದ ಪಿತಾಮಹ ಪದ್ಮಶ್ರೀ ಡಾ. ಎಸ್. ಆರ್. ರಂಗನಾಥನ್ ಅವರಿಗೆ ಪುಷ್ಪ ನಮನ ಸಲ್ಲಿಸಲಾಯಿತು. ಗ್ರಂಥಾಲಯದಲ್ಲಿನ ಸಂಪನ್ಮೂಲಗಳು, ಡಿಜಿಟಲ್ ಸೇವೆಗಳು ಮತ್ತು



ನವೀನ ಉಪಕ್ರಮಗಳನ್ನು ಎತ್ತಿ ತೋರಿಸುವ ಗ್ರಂಥಾಲಯದ ವಾರ್ಷಿಕ ಕೈಪಿಡಿಯನ್ನು ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಬಿಡುಗಡೆಗೊಳಿಸಿ ಮಾತನಾಡಿ, ಗ್ರಂಥಾಲಯಗಳು ಜ್ಞಾನದ ಆಗರವಾಗಿವೆ. ಜ್ಞಾನವನ್ನು ನೀಡುವಂತಹ ಪುಸ್ತಕಗಳನ್ನು ಸಂಗ್ರಹಿಸುವ ಗ್ರಂಥಾಲಯಗಳಲ್ಲಿ ಎಲ್ಲ ವಿಷಯಗಳನ್ನು ತಿಳಿದುಕೊಳ್ಳಬಹುದಾಗಿದೆ. ಡಾ. ಎಸ್.ಆರ್. ರಂಗನಾಥ ಈ ಗ್ರಂಥಾಲಯದ ರೂವಾರಿಯಾಗಿದ್ದು, ಅವರ ಸ್ಮರಣಾರ್ಥ ಈ ಗ್ರಂಥಪಾಲಕರ ದಿನಾಚರಣೆ ಆಚರಿಸಲಾಗುತ್ತಿದೆ ಎಂದರು.

ಪ್ರಭಾರಿ ಗ್ರಂಥಪಾಲಕ ಮಲ್ಲಯ್ಯ ಹಿರೇಮಠ ಮಾತನಾಡಿ, ಆಧುನಿಕ ಗ್ರಂಥಾಲಯಗಳ ಶಿಲ್ಪಿ ಡಾ. ಎಸ್. ಆರ್. ರಂಗನಾಥನ್ ಅವರ ಪರಿಚಯದೊಂದಿಗೆ ಗ್ರಂಥಪಾಲಕರ ದಿನದ ಮಹತ್ವ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನದಲ್ಲಿನ ಕೊಡುಗೆ ಮತ್ತು ಸಾಧನೆಗಳನ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಡೀನ್ ಅಕಾಡೆಮಿಕ್ಸ್ ಡಾ. ಸುಭಾಸ್ ಮೇಟಿ, ಕೋರ್ ಕಮಿಟಿ ಸದಸ್ಯರು, ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕರು, ಸಿಬ್ಬಂದಿ, ಗ್ರಂಥಾಲಯದ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಸಚಿವ ಎಚ್.ಕೆ. ಪಾಟೀಲರ ಜನ್ಮದಿನದ ನಿಮಿತ್ತ ಬಟ್ಟೆ ವಿತರಣೆ

# ಯುವಕರು ಸೇವಾ ಮನೋಭಾವನೆ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮಲ್ಲಸಮುದ್ರ ಗ್ರಾಮದಲ್ಲಿರುವ ಮಾತೃಪುನರ್ ಮಿಲನ ಆನಂದ ವೃದ್ಧಾಶ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲರ 72ನೇ ಜನ್ಮದಿನದ ನಿಮಿತ್ತ ಆಶ್ರಮದ ಹಿರಿಯರಿಗೆ ಅವರ ಅಭಿಮಾನಿ ಬಳಗದಿಂದ ಸುನೀಲ ಬಂಡೆಣ್ಣವರ ನೇತೃತ್ವದಲ್ಲಿ ಬಟ್ಟೆ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೃಷ್ಣಗೌಡ ಪಾಟೀಲ ವಹಿಸಿ ಮಾತನಾಡಿ, ಆರಂಭದ ದಿನಗಳಿಂದಲೂ ಬಡವರ ನೋವು-ನಲಿವುಗಳಿಗೆ ಎಚ್.ಕೆ. ಪಾಟೀಲರು ಸ್ಪಂದಿಸುತ್ತಾ ಬಂದಿದ್ದಾರೆ. ಈ ಹಿಂದೆ ಅವರು ಜವಳಿ, ನೀರಾವರಿ, ಕೃಷಿ, ಗ್ರಾಮೀಣ ಅಭಿವೃದ್ಧಿ ಮುಂತಾದ ಖಾತೆಗಳ ಸಚಿವರಾಗಿ ಬಡವರು, ಗ್ರಾಮೀಣ ಭಾಗದ



ಜನರು ಹಾಗೂ ವೃದ್ಧರಿಗೆ ಅನೇಕ ವಿಶೇಷ ಕ್ರಿಯಾಯೋಜನೆಗಳನ್ನು ರೂಪಿಸಿದ್ದಾರೆ.

ಅನಾಥ ಮಕ್ಕಳು ಮತ್ತು ವೃದ್ಧರ ಕ್ಷೇಮಾಭಿವೃದ್ಧಿಗಾಗಿ ನಿರ್ವಹಿಸಲ್ಪಟ್ಟಿರುವ ಆನಂದವೃದ್ಧಾಶ್ರಮದಲ್ಲಿ ಅವರ ಜನ್ಮದಿನವನ್ನು ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ. ಇಂತಹ ಕಾರ್ಯಕ್ರಮಗಳು ಕಾರ್ಯಕರ್ತರಲ್ಲಿ ಮತ್ತು ಸಮಾಜ ಸೇವಕರಲ್ಲಿ ಸೇವಾ ಮನೋಭಾವನೆಯನ್ನು ಬೆಳೆಸುತ್ತವೆ ಎಂದು ಅಭಿಪ್ರಾಯಪಟ್ಟರು.

ಆನಂದ ವೃದ್ಧಾಶ್ರಮದ ಸಂಸ್ಥಾಪಕ ಅಧ್ಯಕ್ಷರಾದ ಗಂಗಾಧರ ನಭಾಪೂರ ಮಾತನಾಡಿ, ಆನಂದ ವೃದ್ಧಾಶ್ರಮದ ಸುಸಜ್ಜಿತ ಕಟ್ಟಡ ನಿರ್ಮಾಣಗೊಳ್ಳಲು ವಿಶೇಷ ಸಹಾಯ-ಸಹಕಾರ ನೀಡಿದ ಸಚಿವರಾದ ಎಚ್.ಕೆ. ಪಾಟೀಲರ ಸಹಾಯವನ್ನು ಕೃತಜ್ಞತಾ ಪೂರ್ವಕವಾಗಿ ಸ್ಮರಿಸಿದರು.

ಕಳಸಾಪೂರ ಗ್ರಾಮದ ಕೃಷ್ಣಾ ಲಮಾಣಿ ಪ್ರಸಾದ ಸೇವೆಯನ್ನು ವಹಿಸಿಕೊಂಡಿದ್ದರು.

ಮುಖ್ಯ ಅತಿಥಿಗಳಾಗಿ ಸುನೀಲ ಬಂಡೆಣ್ಣವರ, ಅತಿಥಿಗಳಾಗಿ ಚಂದ್ರು ಕೊಣೆಮನೆ ಪಾಲ್ಗೊಂಡಿದ್ದರು. ಆಶ್ರಮದ ಬಸಯ್ಯ ನಂದಿಕೋಲಮಠ ಸ್ವಾಗತಿಸಿ, ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಪ್ರಕಾಶ ವೆರ್ಣೇಕರ್, ಸುರೇಶ ರೇವಣಕರ, ಎಮ್.ಬಿ. ಹಂಚಿನಾಳ, ವೆಂಕಟೇಶ ಕುಲಕರ್ಣಿ, ಜನಾರ್ಧನ ಹವಳೆ, ದೇವಾನಂದ ಪೂಜಾರ, ಪುಲಿಕೇಶ ನಭಾಪೂರ, ಮೋತಿಲಾಲ ಪೂಜಾರ, ಕೃಷ್ಣಮೂರ್ತಿ ಜೆ.ಹವಳೆ, ಮಲ್ಲಸಮುದ್ರ ಗ್ರಾಮದ ಗುರು-ಹಿರಿಯರು ಪಾಲ್ಗೊಂಡಿದ್ದರು.

# ತಹಸೀಲ್ದಾರರಿಂದ ಸ್ಥಳ ಭೇಟಿ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ನಿರಂತರ ಮಳೆಯಿಂದಾಗಿ ತಾಲೂಕಿನಲ್ಲಿ ಹಾದು ಹೋಗಿರುವ ತುಂಗಭದ್ರಾ ನದಿ ತುಂಬಿ ಹರಿಯುತ್ತಿರುವ ಪರಿಣಾಮ ನದಿ ಪಾತ್ರಕ್ಕೆ ಹೊಂದಿಕೊಂಡಿರುವ ವಿವಿಧ ಗ್ರಾಮಗಳ ರೈತರ ಜಮೀನುಗಳಿಗೆ ನೀರು ನುಗ್ಗಿದ್ದು, ಹಲುವಾಗಲು ಮತ್ತು ಗರ್ಭಗುಡಿ ಗ್ರಾಮದ ರಸ್ತೆ ಸಂಪರ್ಕ ಕಡಿತಗೊಂಡ ಹಿನ್ನಲೆಯಲ್ಲಿ ಸ್ಥಳಕ್ಕೆ ತಹಸೀಲ್ದಾರ್ ಬಿ.ವಿ. ಗಿರೀಶ್ ಬಾಬು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಗಿರೀಶ್‌ಬಾಬು, ತಾಲೂಕಿನಲ್ಲಿ ಕಳೆದ ಒಂದು ವಾರದಿಂದ ನಿರಂತರ ಮಳೆಯಾಗುತ್ತಿದ್ದು, ನದಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ. ನದಿ ಪಾತ್ರಕ್ಕೆ ಹೊಂದಿಕೊಂಡಿರುವ ನಿಟ್ಟೂರು, ಬಸಾಪುರ, ತಾವರಗೊಂದಿ, ನಂದ್ಯಾಲ, ಹಲುವಾಗಲು ಮತ್ತು ಗರ್ಭಗುಡಿ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದೇವೆ ಎಂದರು.

ನದಿ ಪಾತ್ರದ ಭಾಗದಲ್ಲಿ ಕೆಲವೆಡೆ ಭತ್ತ, ಮೆಕ್ಕೆಜೋಳ, ಅಡಕೆ ಬೆಳೆಗಳಿಗೆ ನೀರು ನುಗ್ಗಿದೆ. ಈ ಬಗ್ಗೆ ಸಮೀಕ್ಷೆ ಕೈಗೊಳ್ಳಲು ಕ್ರಮವಹಿಸಲಾಗುವುದು. ಹಲುವಾಗಲು ಹಾಗೂ ಗರ್ಭಗುಡಿ ರಸ್ತೆ ಸಂಪರ್ಕ ಕಡಿತಗೊಂಡಿದ್ದು, ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತೆಲಗಿ ಹೋಬಳಿ ಕಂದಾಯ ನಿರೀಕ್ಷಕ ನಾಗರಾಜ, ಗ್ರಾಮ ಆಡಳಿತಾಧಿಕಾರಿ ರೇಖಮ್ಮ, ಗ್ರಾ.ಪಂ ಸಿಬ್ಬಂದಿ ಇದ್ದರು.

## ವಾ.ಕ.ರ.ಸಾ. ಸಂಸ್ಥೆಯಲ್ಲಿ ಸದ್ಭಾವನಾ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹುಬ್ಬಳ್ಳಿ ಕೇಂದ್ರ ಕಚೇರಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ ಅಧ್ಯಕ್ಷತೆಯಲ್ಲಿ ಸದ್ಭಾವನಾ ದಿನದ ಅಂಗವಾಗಿ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು. ಪ್ರತಿಜ್ಞಾ ವಿಧಿಯನ್ನು ವಿ.ಎಫ್. ಬಿಜಾಪೂರ ಭೋದಿಸಿದರು.

ಕಾರ್ಯಕ್ರಮದಲ್ಲಿ ಇಲಾಖಾ ಮುಖ್ಯಸ್ಥರಾದ ಇಮಾಮಕಾಸೀಮ್ ಕಂದಗಲ್, ಜಗದಂಬಾ ಕೋಪರ್ಡೆ, ಬಿ.ಬೋರಯ್ಯ, ಶಶೀಧರ ಕುಂಬಾರ, ಎಸ್.ವಿ. ಅಂಗಡಿ, ಜಿ. ಶ್ರೀನಾಥ, ಅಧಿಕಾರಿಗಳಾದ ಎಂ.ಬಿ. ಕಪಲಿ, ಸುನೀಲ್ ಎಂ, ಕೃಷ್ಣಾನಂದ ಭಟ್, ಸುಮನಾ ಯು, ರವಿ ಅಂಚಿಗಾವಿ, ನವೀನಕುಮಾರ ತಿಪ್ಪಾ, ಜಗದೀಶ ಕೋಳಿ, ಗುರುಪ್ರಸಾದ ಹೋಗಾಡಿ ಸೇರಿದಂತೆ ಸಂಸ್ಥೆಯ ಇನ್ನಿತರ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಬಸವ ಯೋಗ ಮಂದಿರದಲ್ಲಿ ಸಾಪ್ತಾಹಿಕ ವಚನ ಶ್ರಾವಣದ ಮಂಗಲೋತ್ಸವ

# ಅಕ್ಕಮಹಾದೇವಿ ವ್ಯಕ್ತಿತ್ವ ಮಹಿಳೆಯರಿಗೆ ಆದರ್ಶ

■ವಿಜಯಸಾಕ್ಷಿ ಸುದ್ದಿ, ಗದಗ

12ನೇ ಶತಮಾನದಲ್ಲಿನ ಕನ್ನಡದ ಪ್ರಥಮ ಮಹಿಳಾ ಕವಯಿತ್ರಿ, ವಚನಗಾರ್ತಿ, ವೈರಾಗ್ಯನಿಧಿ ಅಕ್ಕಮಹಾದೇವಿಯಲ್ಲಿದ್ದ ತ್ಯಾಗ, ಆತ್ಮಸ್ಥೈರ್ಯ, ಅಚಲ ನಿರ್ಧಾರ, ಭಕ್ತಿ, ವಿಶ್ವಾಸ ಇನ್ನಿತರೆ ಗುಣಗಳನ್ನು 21ನೇ ಶತಮಾನದಲ್ಲಿರುವ ಮಹಿಳೆಯರು ತಮ್ಮ ನಿತ್ಯ ಬದುಕಿನಲ್ಲಿ ರೂಢಿಸಿಕೊಂಡರೆ ಅವರು ಅನೇಕ ಸಮಸ್ಯೆ, ಸಂಕಷ್ಟಗಳಿಂದ ದೂರಿರಲು ಸಾಧ್ಯವಾಗುವುದು ಎಂದು ಕವಯಿತ್ರಿ ಮಂಜುಳಾ ವೆಂಕಟೇಶಯ್ಯಾ ಅಭಿಪ್ರಾಯಪಟ್ಟರು.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಚಿಂತನ ಕೂಟ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಗದಗ ಇವರ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆದ ಸಾಪ್ತಾಹಿಕ ವಚನ ಶ್ರಾವಣ ಕಾರ್ಯಕ್ರಮದ ಮಂಗಲೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ಅಶ್ವಿನಿ ವಿ. ಜಗತಾಪ ಮಾತನಾಡಿ, ಇಂದು ಮಹಿಳೆಯರು ಹೆಚ್ಚು ಸಶಕ್ತರಾಗಿರುವುದು ಅಗತ್ಯವಾಗಿದೆ. ಸಶಕ್ತರಾಗಿರಲು ಸೂರ್ಯನಮಸ್ಕಾರ, ಯೋಗ, ವ್ಯಾಯಾಮ ಮಾಡುವುದರೊಂದಿಗೆ ವಚನಗಳ ತತ್ವಾಚರಣೆಗಳನ್ನು ಪರಿಪಾಲಿಸಿದರೆ ಮಹಿಳೆ ದೈಹಿಕ/ಮಾನಸಿಕ/ನೈತಿಕ/ಸಾಮಾಜಿಕವಾಗಿ ಆರೋಗ್ಯವಂತಳಾಗಿರಲು ಸಾಧ್ಯ ಎಂದರು.

ಕಾರ್ಯಕ್ರಮ ಕುರಿತು ಸಭಿಕರ ಪರವಾಗಿ ಶಾಂತಾ ಕುಂದಗೋಳ, ಕವಿತಾ ಮರಿಗೌಡರ, ವಿಜಯಾ ಚನ್ನಶೆಟ್ಟಿ ಅನಿಸಿಕೆ ತಿಳಿಸಿದರು. ಕಾರ್ಯಕ್ರಮದ ಅಂಗವಾಗಿ ಏರ್ಪಡಿಸಿದ ಬಸವ ಸಾಮೂಹಿಕ ಪ್ರಾರ್ಥನೆ ಮತ್ತು ಬಸವ ಮಂಗಲ ಗೀತೆ ಕಂಠಪಾಠ ಸ್ಪರ್ಧೆಯಲ್ಲಿ ವಿಜೇತರಾದ ಸಂಗೀತಾ ನಾಖೋಡ, ಸುನಂದಾ ಜ್ಯಾನೋಪಂತರ, ಗೌರಿ ಜಿರಂಕಳಿ ಇವರಿಗೆ ಬಹುಮಾನ ನೀಡಲಾಯಿತು. ದಾಸೋಹ ಸೇವೆ ಸಲ್ಲಿಸಿದ ಜಿ.ಪಿ. ಕಟ್ಟಿಮನಿ, ವಿ.ಎಂ. ಮುಂದಿನಮನಿ, ವೀಣಾ ಅಕ್ಕಿ, ಸುಮಿತ್ರಾ ಎನ್.ಭಾಸಲಾಪೂರರನ್ನು ಗೌರವಿಸಲಾಯಿತು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಗಿರಿಜಕ್ಕ ನಾಲತ್ವಾಡಮಠ 'ಮೀಸಲು' ಕುರಿತು ಹಾಡು ಹಾಡಿದರು. ಸುನಂದಾ ಜ್ಯಾನೋಪಂತರ ವಚನ ಸಂಗೀತ ಮಾಡಿದರು. ಜಯಶ್ರೀ ವಸ್ತ್ರದ ಮತ್ತು ಸಂಗಡಿಗರು 'ಬಸವಲಿಂಗ'ದ ಮಹಿಮೆ ಕುರಿತಾದ ಗೀತೆ ಹೇಳಿದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಗೌರವಾಧ್ಯಕ್ಷೆ ಅನ್ನಪೂರ್ಣ ವರವಿ, ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ, ಬಸವ ಯೋಗ ಚಿಂತನ ಕೂಟದ ಖಜಾಂಚಿ ಡಾ. ಎಂ.ವಿ. ಐಹೊಳ್ಳಿ ಉಪಸ್ಥಿತರಿದ್ದರು. ಸಭಾಂಗಣದಲ್ಲಿ ವಿ.ಪಿ. ಸವಡಿ, ಡಾ. ಎ.ಡಿ. ಹುಳಪಲ್ಲೆ, ಎಸ್.ಎನ್. ಹಕಾರಿ, ರವಿ ಹುಡೇದ, ಕೆ.ಎಫ್. ಕುಂಬಾರ, ಶೋಭಾ ಮುಳಗುಂದ, ಗಿರಿಜಾ ಅಂಗಡಿ, ಪ್ರೇಮಾ ಗಾಣಿಗೇರ, ಸುಮಾ ಸುರೇಬಾನ, ಕಸ್ತೂರಿ ಮರಿಗೌಡರ, ಪಾರ್ವತಿ ಭೂಮಾ, ವಿಜಯಲಕ್ಷ್ಮೀ ಮೇಕಳಿ, ಶಕುಂತಲಾ ಬ್ಯಾಳಿ ಮುಂತಾದವರಿದ್ದರು.

ವೀಣಾ ಅಕ್ಕಿ ಸಾಮೂಹಿಕ ಬಸವ ಪ್ರಾರ್ಥನೆ ತಿಳಿಸಿದರು. ಸುಲೋಚನಾ ಐಹೊಳ್ಳಿ ಧರ್ಮ ಗ್ರಂಥ ಪಠಣ ಮಾಡಿದರು. ಬಿ.ಬಿ. ತೋಟಗೇರ ಸ್ವಾಗತಿಸಿದರು. ಕೆ.ಎಸ್. ಪಲ್ಲೇದ ಕಾರ್ಯಕ್ರಮ ನಿರೂಪಿಸಿದರು. ಎಸ್.ಬಿ. ಗೌಡರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಕೃಷಿ ವಿಜ್ಞಾನಿ ಮತ್ತು ಸಾಪ್ತಾಹಿಕ ವಚನ ಶ್ರಾವಣ ಸೇವಾ ಸಮಿತಿ ಅಧ್ಯಕ್ಷ ಡಾ. ಎಸ್.ಕೆ. ನಾಲತ್ವಾಡಮಠ ಮಾತನಾಡಿ, ನಾವಿಂದು ಯಾವುದಾದರೊಂದು ಪ್ರಸಂಗ ನಿಮಿತ್ತ ಕಾರ್ಯಕ್ರಮ ನಡೆಸದೆ ಸಮಾಜೋನ್ನತಿಗೆ ಸಹಕಾರಿಯಾಗುವ ಕಾರ್ಯಕ್ರಮಗಳನ್ನು ನಡೆಸಬೇಕು. ಸಾಪ್ತಾಹಿಕ ವಚನ ಶ್ರಾವಣ ಕಾರ್ಯಕ್ರಮವು ತ್ರಿಗುಣಾದಿಗಳಿಂದ ಪರಿವರ್ತಿತನಾಗಲು ಸಹಕಾರಿಯಾದ್ದು ಶ್ಲಾಘನೀಯ ಕಾರ್ಯಕ್ರಮವಾಗಿದೆ ಎಂದು ಹೇಳಿದರು.

# ಪದ್ಮಾ ಕಬಾಡಿಯವರಿಗೆ 'ಭಾರತ ಭೂಷಣ' ಪ್ರಶಸ್ತಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಹುಬ್ಬಳ್ಳಿಯ ದೇಶಪಾಂಡೆ ನಗರದ ಸವಾಯಿ ಗಂಧರ್ವ ಕಲಾಮಂದಿರದಲ್ಲಿ ಸರ್ವೇಜನಾಃ ಆರ್ಟ್ ಮತ್ತು ಕಲ್ಚರಲ್ ಟ್ರಸ್ಟ್ ಬೆಂಗಳೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಸಹಭಾಗಿತ್ವದಲ್ಲಿ 8ನೇ ವಾರ್ಷಿಕೋತ್ಸವ ಹಾಗೂ ಸಾಂಸ್ಕೃತಿಕ ವೈಭವ ಕಾರ್ಯಕ್ರಮ ಆಗಸ್ಟ್ 31ರಂದು ನಡೆಯಲಿದೆ. ಸಮಾರಂಭದಲ್ಲಿ ಗದುಗಿನ ಕಲಾವಿದೆ ಡಾ. ಪದ್ಮಾ ಜೆ.ಕಬಾಡಿ ಅವರ ಸಾಹಿತ್ಯ ಕ್ಷೇತ್ರದಲ್ಲಿನ ಗಣನೀಯ ಸೇವೆಯನ್ನು ಗುರುತಿಸಿ ಗೌರವಪೂರ್ವಕವಾಗಿ 'ಭಾರತ ಭೂಷಣ' ರಾಷ್ಟ್ರ ಪ್ರಶಸ್ತಿ ನೀಡಿ ಗೌರವಿಸಲಾಗುವುದೆಂದು ಸಂಸ್ಥಾಪಕರು, ರಾಜ್ಯಾಧ್ಯಕ್ಷರು, ಚಲನಚಿತ್ರ-ಕಿರುತರೆ ನಟಿ ಲಕ್ಷಿತಾ ಗಂಗಾವತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಂಧ್ರ, ಮಹಾರಾಷ್ಟ್ರದಿಂದ ಕೃಷ್ಣಾ ಮೇಲ್ದಂಡೆ ಯೋಜನೆಗೆ ಅಡ್ಡಿ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕೃಷ್ಣಾ ಮೇಲ್ದಂಡೆ ಯೋಜನೆಗೆ ಆಂಧ್ರ ಹಾಗೂ ಮಹಾರಾಷ್ಟ್ರ ರಾಜ್ಯಗಳು ಅಡ್ಡಿ ಮಾಡುತ್ತಿವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

ವಿಧಾನಸಭೆಯಲ್ಲಿ ಮಾತನಾಡಿದ ಅವರು, ಕೃಷ್ಣಾ ಮೇಲ್ದಂಡೆ ಯೋಜನೆಗೆ ಅಧಿಸೂಚನೆಗೆ ಒಮ್ಮೆ ಆಂಧ್ರ ಪ್ರದೇಶ ಮತ್ತೊಮ್ಮೆ ಮಹಾರಾಷ್ಟ್ರದವರು ಕೇಂದ್ರದ ಮೇಲೆ ಒತ್ತಡ ತಂದು ನಿಲ್ಲಿಸಿದರು ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು. ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್.ಪಾಟೀಲ್ ಅವರು ಈ ಯೋಜನೆಯ ಪರವಾಗಿದ್ದು, ಇದಕ್ಕೆ ಅಧಿಸೂಚನೆ ಹೊರಡಿಸಲೇಬೇಕು ಎಂದು ಸಂಬಂಧಪಟ್ಟ ರಾಜ್ಯಗಳ ಸಭೆ ನಡೆಸಲು ಎರಡು ಬಾರಿ ಪ್ರಯತ್ನಿಸಿದರು.

### ಗುಡ್ಡಾಪೂರ ದಾನಮ್ಮ ದೇವಿ ಪುರಾಣ ಮುಕ್ತಾಯ ಸಮಾರಂಭದಲ್ಲಿ ಅನ್ನದಾನೀಶ್ವರ ಸ್ವಾಮೀಜಿ

# ಪುರಾಣ, ಪ್ರವಚನಗಳನ್ನು ನಿರಂತರ ಆಲಿಸಬೇಕು

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಸಮಾಜದ ಒಳಿತಿಗಾಗಿ ತನ್ನ ಜೀವನವನ್ನು ಮುಡುಪಾಗಿಟ್ಟ ಗುಡ್ಡಾಪೂರ ದಾನಮ್ಮ ದೇವಿಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮುಂಡರಗಿಯ ನಾಡೋಜ ಡಾ. ಅನ್ನದಾನೀಶ್ವರ ಸ್ವಾಮೀಜಿಗಳು ಹೇಳಿದರು.

ಇಲ್ಲಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿದ್ದ ಗುಡ್ಡಾಪೂರ ದಾನಮ್ಮ ದೇವಿ ಪುರಾಣ ಮುಕ್ತಾಯ ಸಮಾರಂಭದ ಸಾನ್ನಿಧ್ಯ ವಹಿಸ್ಯಿವರು ಆಶೀರ್ವಚನ ನೀಡುತ್ತಿದ್ದರು.

ಹರ್ಲಾಪೂರದ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಶ್ರೀಗಳು ಮಾತನಾಡಿ, ಆಚಾರ, ವಿಚಾರ, ಜ್ಞಾನ, ಮತ್ತು ಭಕ್ತಿ ಭಾವನೆಗಳಿಂದ ಈ ಸಮಾಜದ ಉದ್ಧಾರಕ್ಕಾಗಿಯೇ ಬದುಕು ಸಾಗಿಸಿದ ಗುಡ್ಡಾಪೂರ ದಾನಮ್ಮ ದೇವಿಯಂತೆಯೇ ಅನ್ನದಾನೀಶ್ವರ ಶ್ರೀಗಳು ಧಾರ್ಮಿಕ ಚಿಂತನೆಗಳ, ಪ್ರಚವನಗಳ ಮೂಲಕ ಹಾಗೂ ತಮ್ಮ ಅದ್ಭುತ ಸಾಹಿತ್ಯ ಮೂಲಕ ಸಮಾಜಮುಖಿ ಕಾರ್ಯದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಅವರಿಗೆ ಹಣ, ಸಂಪತ್ತು ಕೊಡುವುದು ಬೇಡ, ತಮ್ಮ ಭಕ್ತಿಯನ್ನು ಕೊಟ್ಟರೆ ಸಾಕು ಅವರ ಆರ್ಶಿವಾದ ದೊರೆತು ಜೀವನ ಪಾವನವಾಗುತ್ತದೆ. ಇಂದು ಕೆಲವು ದೇವಸ್ಥಾನ, ಮಠ-ಮಾನ್ಯಗಳು ಸ್ವಾರ್ಥಕ್ಕಾಗಿ ಹುಟ್ಟಿಕೊಂಡು ಹಣ ಸಂಪಾದನೆಯ ಕೇಂದ್ರಗಳಾಗಿದ್ದು, ಭಕ್ತರು ಜಾಗೃತರಾಗಿರಬೇಕು ಎಂದು ಎಚ್ಚರಿಕೆ ನೀಡಿದ ಅವರು ಸಕಾಲ, ಅಕಾಲ, ಪೂರ್ವ ಕಾಲದ ಮರಣದ ಕುರಿತು ವಿವರಿಸಿದರು.



ಪುರಾಣ ಪ್ರವಚನ ಮುಕ್ತಾಯ ಮಾಡಿದ ಆಧ್ಯಾತ್ಮಿಕ ಚಿಂತಕಿ ಡಾ. ಗಿರಿಜಾ ಹಸಬಿ ಮಾತನಾಡಿ, ಶರೀರ, ಬುದ್ಧಿ, ಆತ್ಮ ವಿಕಾಸವಾಗಲು ಶರಣರ, ಮಹಾತ್ಮರ ಚರಿತ್ರೆಗಳನ್ನು ಆಲಿಸಬೇಕು. ಅರಿಷಡ್ವರ್ಗಗಳನ್ನು ತ್ಯಜಿಸಿ ಸತ್ಕಾರ್ಯಗಳಲ್ಲಿ ತೊಡಗಿಕೊಂಡು ತನು-ಮನ ಶುದ್ಧಿ ಮಾಡಿಕೊಳ್ಳಬೇಕು. ನಮ್ಮಲ್ಲಿಯ ವಿಕಾರಗಳ ಅಂಗಗಳನ್ನು ತೊರೆದು ವೈಜ್ಞಾನಿಕವಾದ ಲಿಂಗ ಪೂಜೆ ನಿಷ್ಠರಾಗಬೇಕು. ಮನುಷ್ಯನಲ್ಲಿಯ ಮನ, ನಿಶ್ಚಯ, ಮತ್ತು ಆವರಣ ಎಂಬ ಮೂರು ದೋಷಗಳನ್ನು ಕಳೆದುಕೊಳ್ಳಲು ದಾರ್ಶನಿಕರ ತತ್ವಗಳನ್ನು ಅಳವಡಿಸಿಕೊಂಡು ನಿನ್ನನ್ನು ನೀನು ಅರಿತರೆ ದೇವನಾಗಬಹುದು ಎಂದು ವಿವರಿಸಿದರು.

ಸೇವಾ ನಿವೃತ್ತಿಯಾದ ಸುರೇಶ ಹುಬ್ಬಳ್ಳಿ, ಮಹೇಶ ಪಾಟೀಲ, ಶರಣಪ್ಪ ನವಚಿದ್ರ ಹಾಗೂ ಪುರಾಣ ಸೇವಾ ಕಾರ್ಯಕರ್ತರನ್ನು ಸನ್ಮಾನಿಸಲಾಯಿತು. ಷಡಕ್ಷರಯ್ಯ ಬದ್ನಿಮಠ, ಬಸನಗೌಡ ಪಾಟೀಲ ಸಂಗೀತ ಸೇವೆ ನೀಡಿದರು. ವೇ.ಮೂ ಶಂಕ್ರಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಯುವ ಧುರೀಣ ವೀರಯ್ಯ ಗಂಧದ, ಗ್ರಾ.ಪಂ ಸದಸ್ಯರಾದ ಪೀರಸಾಬ ನದಾಫ್, ರಮೇಶ ಭಾವಿ, ವಿರೂಪಾಕ್ಷಪ್ಪ ಬೆಟಗೇರಿ, ರಜೀಯಾಬೇಗಂ ತಹಸೀಲ್ದಾರ, ಪಿ.ಡಿ.ಓ ಅಮೀರನಾಯಕ ಉಪಸ್ಥಿತರಿದ್ದರು. ಅಮರೇಶ ಕರೆಕಲ್ಲ ಸ್ವಾಗತಿಸಿದರು. ಮುತ್ತುರಾಜ್ ಗಡ್ಡಿ ನಿರೂಪಿಸಿದರು.

> ದಾನಮ್ಮ ದೇವಿಯಂತಹ ಶರಣೆಯರು, ಶರಣರು ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಬಾಳಿದ್ದಾರೆ. ಅಲ್ಲಮಪ್ರಭುಗಳು, ಅಜಗಣ್ಣ, ಮುಕ್ತಾಯಕ್ಕರು ಮೌಲ್ಯಯುತ ಬದುಕು ಈ ಗ್ರಾಮದಲ್ಲಿ ನೆಲೆಯೂರಿದೆ. ಇಂತಹ ಪವಿತ್ರವಾದ ಸ್ಥಾನದಲ್ಲಿ ಪ್ರಾಣಿಗಳಿಗಿಂತ ಕೀಳಾಗದೇ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ನಿತ್ಯ ನಿರಂತರ ಪುರಾಣ, ಪ್ರವಚನಗಳನ್ನು ಆಲಿಸಬೇಕು ಎಂದು ಡಾ. ಅನ್ನದಾನೀಶ್ವರ ಸ್ವಾಮೀಜಿ ಸಲಹೆ ನೀಡಿದರು.

# ಶಿಕ್ಷಣಕ್ಕೆ ಅದಮ್ಯ ಶಕ್ತಿಯಿದೆ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಶಿಕ್ಷಣಕ್ಕೆ ಹೆಚ್ಚು ಮಹತ್ವವಿದ್ದು, ನಮ್ಮ ಕುಟುಂಬದ ಸ್ಥಿತಿಯನ್ನೂ ಬದಲಾವಣೆ ಮಾಡುವ ಶಕ್ತಿ ಶಿಕ್ಷಣಕ್ಕಿದೆ. ಸರ್ಕಾರಿ ಶಾಲೆಗಳಲ್ಲಿ ಉಚಿತ ಹಾಗೂ ಉತ್ತಮ ಶಿಕ್ಷಣ ನೀಡುತ್ತಿದ್ದು, ಇಲ್ಲಿನ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ಬಿಓಐ ಬ್ಯಾಂಕಿನ ವ್ಯವಸ್ಥಾಪಕ ಜಗದೀಶ ಕನ್ನೋಗಿ ಹೇಳಿದರು.

ಡಂಬಳ ಗ್ರಾಮದ ಸರಕಾರಿ ಡಿಪಿಇಪಿ ಶಾಲಾ ಮಕ್ಕಳಿಗೆ ಬ್ಯಾಂಕ್ ಆಫ್ ಇಂಡಿಯಾ ವತಿಯಿಂದ 300 ನೋಟ್‌ಬುಕಗಗಳನ್ನು ವಿತರಿಸಿ ಅವರು ಮಾತನಾಡಿದರು.

ಎಸ್‌ಡಿಎಮ್‌ಸಿ ಅಧ್ಯಕ್ಷ ಗವಿಸಿದ್ದಪ್ಪ ಹಾದಿಮನಿ ಮಾತನಾಡಿ, ಸರ್ಕಾರಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಕರಿದ್ದಾರೆ. ಬಡವರು, ಶೋಷಿತ ವರ್ಗದ ಸಮಗ್ರ ಅಭಿವೃದ್ಧಿಗೆ ಶಿಕ್ಷಕರ ಪಾತ್ರ ಅನನ್ಯವಾಗಿದೆ. ಮಕ್ಕಳ ಸಮಗ್ರ ಅಭಿವೃದ್ಧಿಯ ಮೂಲಕ ದೇಶದ ಆಸ್ತಿಯನ್ನಾಗಿ ಮಾಡಬೇಕೆಂದು ಹೇಳಿದರು.

ಮುಖ್ಯೋಪಾಧ್ಯಾಯ ಎಸ್.ಜಿ. ಪಾಟೀಲ್, ಬ್ಯಾಂಕ್ ಸಿಬ್ಬಂದಿ ಮಹೇಶ ಬಂಡಿ, ಶಿಕ್ಷಕಿಯರಾದ ಐ.ಬಿ. ಅಂಗಡಿ, ವಿ.ಆರ್. ಅಥಣಿ, ಆರ್.ಎ. ಅಕ್ಕಿ, ಪಿ.ಕೆ. ಲಮಾಣಿ, ಪಿ.ಎಂ. ಗುಡದೂರ, ಸಿ.ಜಿ. ವಾಲ್ಮೀಕಿ, ಗಂಗಮ್ಮ ಪೂಜಾರ, ಎಸ್.ಬಿ. ಸತ್ಯಣ್ಣವರ್ ಸೇರಿದಂತೆ ಎಸ್‌ಡಿಎಂಸಿ ಸದಸ್ಯರು, ವಿದ್ಯಾರ್ಥಿಗಳು ಇದ್ದರು.

### ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ರಿಯಾಯಿತಿ

# ಈಗಲೇ ಪಾವತಿಸಿದರೆ ಶೇ.50 ರಿಯಾಯಿತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿ ಸರ್ಕಾರವು ಆಗಸ್ಟ್ 21ರಂದು ಆದೇಶ ಹೊರಡಿಸಿದೆ.



ಈ ರಿಯಾಯಿತಿಯು 2025ನೇ ಆಗಸ್ಟ್ 23ರಿಂದ ಸೆಪ್ಟೆಂಬರ್ 12ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ. ಸರ್ಕಾರದ ಆದೇಶದ ದಿನಾಂಕ 11.02.2023ರ ಒಳಗಾಗಿ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಒಂದು ಬಾರಿಯ ಕ್ರಮವಾಗಿ (ಠಟಿಜ ಣಟಜ ಟಜಭಿಣಡಿಜ) ಮಾತ್ರ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು.

3.3.2023ರ ಆದೇಶದಲ್ಲಿ ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ 11.02.2023ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇ.50ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು.

ಸರ್ಕಾರದ 05.07.2023ರ ಆದೇಶದಲ್ಲಿ ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ 11.02.2023ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿ ಶೇ.50ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿತ್ತು ಹಾಗೂ ಈ ರಿಯಾಯಿತಿಯು ದಿನಾಂಕ 09.09.2023ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ತಿಳಿಸಲಾಗಿತ್ತು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳ 26-06-2025 ಮತ್ತು 12-08-2025ರ ಪತ್ರಗಳಲ್ಲಿ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ದಿನಾಂಕ 05.07.2025ರಿಂದ 11.07.2025ರವರೆಗೆ ಕಾಲಾವಕಾಶವನ್ನು ಕಲ್ಪಿಸಿ ಆದೇಶ ಹೊರಡಿಸುವಂತೆ ಕೋರಲಾಗಿತ್ತು. ಸದರಿ ಅವಧಿಯು ಮುಕ್ತಾಯವಾಗಿರುವುದರಿಂದ ಸದರಿ ಕಾಲಾವಕಾಶವನ್ನು ದಿನಾಂಕ 23.08.2025ರಿಂದ 12.09.2025ರವರೆಗೆ ಕಲ್ಪಿಸುವಂತೆ ಕೋರಿದ್ದಾರೆ.

ಬೆಂಗಳೂರು ಸಾರಿಗೆ ಮತ್ತು ರಸ್ತೆ ಸುರಕ್ಷತೆ ಆಯುಕ್ತರು ದಿನಾಂಕ 04-03-2025ರ ಪ್ರಸ್ತಾವನೆಯಲ್ಲಿ ಪೊಲೀಸ್ ಇಲಾಖೆಯ ಸಂಚಾರಿ e-Challanಗಳಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಹಾಗೂ ಸಾರಿಗೆ ಇಲಾಖೆಯಲ್ಲಿ 2018-19ನೇ ಸಾಲಿನ ಪೂರ್ವದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ವಾಹನ ಮಾಲೀಕರುಗಳಿಂದ ಶೇ.50ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶ ಕಲ್ಪಿಸುವಂತೆ ಕೋರಿದ್ದಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ರಿಯಾಯಿತಿಯು 2025ನೇ ಆಗಸ್ಟ್ 23ರಿಂದ ಸೆಪ್ಟೆಂಬರ್ 12ರವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದು ಆದೇಶಿಸಿದೆ ಎಂದು ಸಾರಿಗೆ ಇಲಾಖೆಯ ಅಧೀನ ಕಾರ್ಯದರ್ಶಿಗಳು ತಿಳಿಸಿದ್ದಾರೆ.

# ವಿದ್ಯಾರ್ಥಿಗಳ ಸಾಧನೆಯೇ ಶಿಕ್ಷಕರಿಗೆ ಸಂತೃಪ್ತಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿನ 150 ವರ್ಷಗಳ ಇತಿಹಾಸ ಹೊಂದಿರುವ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ-1ರಲ್ಲಿ 1989-90ರಿಂದ 1995-96ರಲ್ಲಿ 7ನೇ ತರಗತಿ ಕಲಿತ ವಿದ್ಯಾರ್ಥಿಗಳು ತಮಗೆ ಅಕ್ಷರ ಜ್ಞಾನ ನೀಡಿ ಬದುಕಿಗೆ ದಾರಿ ದೀಪವಾದ ಗುರುಗಳನ್ನು ಸನ್ಮಾನಿಸಿ ಗುರುವಂದನೆ ಸಲ್ಲಿಸಿದರು.



ಗೌರವ ವಂದನೆ ಸ್ವೀಕರಿಸಿ ಶಿಕ್ಷಕರಾದ ಜಿ.ಎಸ್. ಜಾವೂರ, ಎ.ಎಚ್. ಅಂಚಿ ಮಾತನಾಡಿ, ನಮ್ಮೊಳಗಿನ ಪ್ರತಿಯೊಂದು ಮಿಂಚು, ಅರಿವಿನ ಕಿಡಿ, ಹೊಸ ಹೊಳಹು ಇವೆಲ್ಲವಕ್ಕೂ ಮೂಲ ಗುರುವಿನ ಪ್ರೇರಣೆ. ಅಂಥ ಅರಿವಿನ ಬೆಳಕೇ ಜೀವಿತದುದ್ದಕ್ಕೂ ಬದುಕನ್ನು ಸರಾಗಗೊಳಿಸುತ್ತದೆ. ಸಂಕಷ್ಟಗಳನ್ನು ಜಯಿಸುವಂತೆ ಮಾಡುತ್ತದೆ. ತಲೆಯೆತ್ತಿ ಮುನ್ನಡೆಯಲು ನೆರವಾಗುತ್ತದೆ. ವ್ಯಕ್ತಿಯ ಬದುಕಿಗೆ ಸಂಸ್ಕಾರ, ಸದ್ವಿಚಾರ, ಸುಜ್ಞಾನ, ಸತ್ ಸಂಪ್ರದಾಯ, ಮಾನೀಯ ಮೌಲ್ಯಗಳನ್ನು ಬಿತ್ತಿ ಉತ್ತಮ ನಾಗರಿಕರನ್ನಾಗಿ ಮಾಡುವ ಗುರು ಸದಾ ಸ್ಮರಣೀಯ ಎಂದರು.

ಶಿಕ್ಷಕರಾದ ಆರ್.ಸಿ. ಕೋಲಕಾರ, ವೈ.ವೈ. ಬಂಡಿ, ಎಸ್.ಜಿ. ಮಾದನಬಾವಿ, ಪಾರ್ವತಮ್ಮಕ್ಕೆ ಮಾತನಾಡಿ, ಗುರು-ಶಿಷ್ಯರ ಬಾಂಧವ್ಯ ಶ್ರೇಷ್ಠವಾದದ್ದು. ವಿದ್ಯಾರ್ಥಿಗಳ ಜೀವನದ ಸಾಧನೆ, ಯಶಸ್ಸು ಶಿಕ್ಷಕರಿಗೆ ಸಂತೃಪ್ತಿ ತರುತ್ತದೆ. ಪ್ರತಿಯೊಬ್ಬರ ಯಶಸ್ಸಿನ ಹಿಂದೆ ಗುರುವಿನ ಕೃಪೆ ಇದ್ದೇ ಇರುತ್ತದೆ. ಹೃದಯದಲ್ಲಿ ಸದಾ ಗುರುವಿಗೆ ಜಾಗವಿರಲಿ. ಶಿಕ್ಷಕರನ್ನು ಸ್ಮರಿಸುವ, ಗೌರವಿಸುವ ಸಂಸ್ಕೃತಿ ನಶಿಸುತ್ತಿರುವ ಪತಿಸ್ಥಿತಿಯಲ್ಲೂ 28 ವರ್ಷಗಳ ಹಿಂದೆ ಕಲಿಸಿದ ಶಿಕ್ಷಕರನ್ನು ಕರೆಸಿ ಗೌರವಿಸಿ ಸನ್ಮಾನಿಸಿರುವುದು ಸಂತಸ ತಂದಿದೆ ಎಂದರು.

ವಿದ್ಯಾರ್ಥಿ ಶಿವಲಿಂಗಯ್ಯ ಹೊತಗಿಮಠ ಪ್ರಾಸ್ತಾವಿಕ ನುಡಿದರು. ಈರಮ್ಮ ದುದ್ದಗಿ ಅನಿಸಿಕೆ ವ್ಯಕ್ತಪಡಿಸಿದರು. ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪ ಶಿರಬಡಗಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ, ಬಸವರಾಜ ಗೋಡಿ, ಶಿಕ್ಷಕರಾದ ಆರ್.ಸಿ. ಕೊಪ್ಪಿ, ಕೆ.ಜಿ. ಹಿರೇಮಠ, ಡಿ.ಜೆ. ಅಂಗಡಿ, ಎಂ.ಎಫ್. ಹಾವೇರಿಮಠ, ಬಿಆರ್‌ಪಿ ಈಶ್ವರ ಮೆಡ್ಲೇರಿ, ಸತೀಶ ಬೋಮಲೆ, ಉಮೇಶ ನೇಕಾರ, ದ್ಯಾಮಣ್ಣ ಕಮತದ, ಶಂಕರ ಬ್ಯಾಡಗಿ, ಆರ್.ಬಿ. ಆಡರಕಟ್ಟಿ, ಎಸ್.ಎಸ್. ಮಹಾಲಿಂಗಶೆಟ್ಟರ, ಈ.ಎಚ್. ಪೀಟರ, ಎಸ್.ಎಂ. ಬೋಮಲೆ, ಖುದುಸಿಯಾ ನದಾಫ್ ಇದ್ದರು. ಚಂದ್ರಮತಿ ಹರಪನಹಳ್ಳಿ, ದೀಪಾ ಘೋರ್ಪಡೆ, ಶೀಲಾಕುಮಾರಿ ಕೆ, ಸತೀಶ ಉಳ್ಳಟ್ಟಿ ನಿರೂಪಿಸಿದರು.

# ಶ್ರೀ ಗೌರಿ ಗಣೇಶ ಶಿಕ್ಷಣ ಸಂಸ್ಥೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಇಲ್ಲಿನ ಹುಯಿಲಗೋಳ ರಸ್ತೆಯ ಗೌರಿಗುಡಿ ಓಣಿಯಲ್ಲಿರುವ ಶ್ರೀ ಗೌರಿ ಗಣೇಶ ಶಿಕ್ಷಣ ಸಂಸ್ಥೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಬಾಲ ಕೃಷ್ಣನನ್ನು ತೊಟ್ಟಿಲಿಗೆ ಹಾಕುವ ಮೂಲಕ ಅದ್ದೂರಿಯಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ನಿರ್ದೇಶಕ ಬಸವರಾಜ ಕುಂದಗೋಳ ವಹಿಸಿದ್ದರು.

ಶಾಲೆಯ ಮಕ್ಕಳು ಕೃಷ್ಣ ಮತ್ತು ರಾಧೆಯ ವೇಷಭೂಷಣಗಳನ್ನು ಧರಿಸಿ ಸಾಕ್ಷಾತ್ ಕೃಷ್ಣ- ರಾಧೆ-ಯರಂತೆ ಕಂಗೊಳಿಸಿದರು. ಶಾಲೆಯ ಮುಖ್ಯೋಪಾಧ್ಯಾಯ ಎಸ್.ಪಿ. ಅರ್ಕಸಾಲಿ, ಸಹ ಶಿಕ್ಷಕಿಯರಾದ ಎಸ್.ಎಮ್. ದೇವಧರ, ಯು.ಕೆ. ಕೊಂಗಾರಿ, ಎಸ್.ಎಸ್. ಗುಗ್ಗರಿ, ಎಮ್.ಎಲ್. ಕೊಪ್ಪಳ, ಯು.ಎ. ಹುನಕುಂಟಿ. ಕೆ.ಬಿ. ಮಾರನಬಸರಿ ಜಿ.ಎಂ. ನೀಲವಾಣಿ, ಎನ್.ಎಮ್. ನಾಗರಾಳ, ಎಸ್.ಎಫ್. ಗೌಡರ ಉಪಸ್ಥಿತರಿದ್ದರು.

# ಕುಡುಒಕ್ಕಲಿಗರ ಸಂಘದ ವಾರ್ಷಿಕ ಮಹಾಸಭೆ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘದ 13ನೇ ವಾರ್ಷಿಕ ಮಹಾಸಭೆ, ಪ್ರತಿಭಾ ಪುರಸ್ಕಾರ, ಮಾಜಿ ಸೈನಿಕರು ಮತ್ತು ವಿಶೇಷ ಸಾಧಕರ ಸನ್ಮಾನ ಸಮಾರಂಭವು ಆಗಸ್ಟ್ 23ರಂದು ಬೆಳಿಗ್ಗೆ 10.30ಕ್ಕೆ ಬಿಂಕದಕಟ್ಟಿ ಪ್ರಾಣಿಸಂಗ್ರಹಾಲಯದ ಬಳಿಯಿರುವ ಕುಡುಒಕ್ಕಲಿಗರ ಭವನದಲ್ಲಿ ಜರುಗಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪ.ಪೂ.ಶ್ರೀ ಶಿವಕುಮಾರ ಮಹಾಸ್ವಾಮಿಗಳು, ನಂದಿವೇರಿಮಠ ತಪೋಕ್ಷೇತ್ರ ಡೋಣಿ-ಕಪೋತಗಿರಿ-ಗದಗ ಇವರು ವಹಿಸುವರು.

ಮುಖ್ಯ ಅತಿಥಿಗಳಾಗಿ ಸಾಹಿತಿ ಮಹೇಂದ್ರ ಕುರಡಿ, ಯುವ ಉದ್ಯಮಿ ಅರುಣ ಉಪನಾಳ, ಗುಡ್ಡಪ್ಪ ಶಿದ್ಧಲಿಂಗಪ್ಪ ಗಡ್ಡಿ, ನಾಗಪ್ಪ ತಿಮ್ಮಗೊಣ್ಣವರ, ಸಂಘದ ಉಪಾಧ್ಯಕ್ಷ ಈರಪ್ಪಣ್ಣ ಬಿಸನಳ್ಳಿ ಆಗಮಿಸುವರು. ಸಂಘದ ರಾಜ್ಯಾಧ್ಯಕ್ಷ ಶಿವಕುಮಾರಗೌಡ ಎಚ್.ಪಾಟೀಲ ಅಧ್ಯಕ್ಷತೆ ವಹಿಸುವರು.

ಲಿಂಗರಾಜರ ಅಭಿಮಾನಿಗಳು, ಕುಡುಒಕ್ಕಲಿಗ ಸಮಾಜ ಬಾಂಧವರು, ಯುವಕರು, ಗದಗ ಜಿಲ್ಲಾ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಸಂಘದ ಗದಗ ಜಿಲ್ಲಾಧ್ಯಕ್ಷ ಸಿದ್ಧರಾಮಪ್ಪ ಬ.ಗೋಜನೂರ ವಿನಂತಿಸಿದ್ದಾರೆ.

# ನಾಗಾವಿಯಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದ ಡಿವೈಎಸ್ಪಿ ಮುರ್ತುಜಾ ಖಾದ್ರಿ!

**■ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕರ ಸುರಕ್ಷತೆಗಾಗಿ ರಾಜ್ಯ ಪೊಲೀಸ್ ಇಲಾಖೆ ಜಾರಿಗೆ ತಂದಿರುವ ಮನೆ-ಮನೆಗೆ ಪೊಲೀಸ್ ಎಂಬ ವಿನೂತನ ಕಾರ್ಯಕ್ರಮದ ಅಂಗವಾಗಿ ಗದಗ ತಾಲೂಕಿನ ನಾಗಾವಿ ಗ್ರಾಮದಲ್ಲಿ ಡಿವೈಎಸ್ಪಿ ಮುರ್ತುಜಾ ಖಾದ್ರಿ ನೇತೃತ್ವದಲ್ಲಿ ಪೊಲೀಸರು ಜಾಗೃತಿ ಮೂಡಿಸಿದರು.

ಪೊಲೀಸರು ಮನೆಗೆ ಬಂದಾಗ ಭಯ ಪಡದೇ ಮುಕ್ತವಾಗಿ ಸಮಸ್ಯೆ ಹೇಳಿಕೊಳ್ಳಿ, ಗ್ರಾಮದಲ್ಲಿ ಅಪರಿಚಿತ ವ್ಯಕ್ತಿಗಳು ಸುಳಿದಾಡಿದರೆ ಪೊಲೀಸರಿಗೆ ಮಾಹಿತಿ ನೀಡಿ, ಸೈಬರ್ ಕ್ರೈಮ್ ಬಗ್ಗೆ ಎಚ್ಚರಿಕೆಯಿಂದ ಇರಲು ಗ್ರಾಮಸ್ಥರಿಗೆ ಮನವಿ ಮಾಡಿದರು.



ಪೊಲೀಸ್ ಇಲಾಖೆಯಿಂದ ಕೈಗೊಂಡಿರುವ ಕಾರ್ಯಕ್ರಮಗಳ ಕರಪತ್ರಗಳನ್ನು ಗ್ರಾಮಸ್ಥರಿಗೆ ವಿತರಣೆ ಮಾಡಿ, ಯಾವುದೇ ಕಾರಣಕ್ಕೂ ಪೊಲೀಸರೆಂದರೆ ಭಯ ಬೀಳಬೇಡಿ, ಮುಕ್ತವಾಗಿ ಸಮಸ್ಯೆ ಹೇಳಿಕೊಳ್ಳಿ ಎಂದರು. ತುರ್ತು ಪರಿಸ್ಥಿತಿಯಲ್ಲಿ 112ಗೆ ಕರೆ ಮಾಡಲು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಪೊಲೀಸ್ ಠಾಣೆಯ ಸಿಬ್ಬಂದಿಗಳಿದ್ದರು.

## ನಾಳೆ ಕಾಳಿಕಾ ದೇವಸ್ಥಾನದಲ್ಲಿ ಪಾಲಕಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಹೊಸಪೇಟ ಚೌಕದ ಶ್ರೀ ಕಾಳಿಕಾ ದೇವಿ ದೇವಸ್ಥಾನದಲ್ಲಿ ಆ.23ರ ಸಾಯಂಕಾಲ 7 ಗಂಟೆಗೆ ಬೆನಕನ ಅಮವಾಸ್ಯೆ ನಿಮಿತ್ತ ಪಾಲಕಿ ಉತ್ಸವ ಜರುಗಲಿದ್ದು, ಪಾಲಕಿ ಭಕ್ತಿ ಸೇವೆಯನ್ನು ದೇವಸ್ಥಾನದ ಟ್ರಸ್ಟ್ ಕಮಿಟಿಯ ಹಿರಿಯ ನಿರ್ದೇಶಕರು ಹಾಗೂ ಗದಗ ಜಿಲ್ಲಾ ವಿಶ್ವಕರ್ಮ ಸಮಾಜದ ಯುವ ಮುಖಂಡರಾದ ಮಹೇಶ ಬಡಿಗೇರ ಮತ್ತು ಕುಟುಂಬದ ಸದಸ್ಯರು, ವಿಶ್ವಕರ್ಮ ಸಮಾಜದ ಹಿರಿಯರಾದ ರಮೇಶ ಯಚ್ಚರಪ್ಪ ಪತ್ತಾರ ಕುಟುಂಬದ ಸದಸ್ಯರು ವಹಿಸಿಕೊಂಡಿದ್ದಾರೆ.

ಇದೇ ಸಂದರ್ಭದಲ್ಲಿ ಗಣೇಶ ಚತುರ್ಥಿ ಕುರಿತು ವಿಶೇಷ ಉಪನ್ಯಾಸವನ್ನು ಗದಗ ಸರಕಾರಿ ಪದವಿಪೂರ್ವ ಕಾಲೇಜನ ಉಪನ್ಯಾಸಕರಾದ ಮಂಜುನಾಥ ಅಕ್ಕಸಾಲಿ ನೀಡಲಿದ್ದಾರೆ. ಪಾಲಕಿ ಉತ್ಸವದ ನಂತರ ಪ್ರಸಕ್ತ ಶರನ್ನವರಾತ್ರಿ ಉತ್ಸವ-2025ರ ಆಚರಣೆ ಕುರಿತು ಪೂರ್ವಭಾವಿ ಸಭೆ ಮತ್ತು ಶ್ರೀ ವಿಶ್ವಕರ್ಮ ಗಾಯಿತ್ರಿ ಮಹಿಳಾ ಮಂಡಳದ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಬೆಟಗೇರಿ ವಿಶ್ವಕರ್ಮ ಸಮಾಜದ ಸಮಸ್ತ ಬಾಂಧವರು, ಹಿಂದಿನ ಕಮಿಟಿಯ ಎಲ್ಲಾ ಪದಾಧಿಕಾರಿಗಳು, ಮಹಿಳೆಯರು, ಟ್ರಸ್ಟ್‌ನ ಕಾರ್ಯಕಾರಿ ಮಂಡಳಿಯ ಸರ್ವ ಸದಸ್ಯರು ಸಕಾಲಕ್ಕೆ ಆಗಮಿಸಿ ಮಾರ್ಗದರ್ಶನ, ಸಲಹೆ, ಸೂಚನೆಗಳನ್ನು ನೀಡಿ ಕಾರ್ಯವನ್ನು ಯಶಸ್ವಿಗೊಳಿಸಲು ಟ್ರಸ್ಟ್ ಕಮಿಟಿಯ ಅಧ್ಯಕ್ಷ ಶ್ರೀಧರ ಎಸ್.ಕೊಣ್ಣೂರ ಹಾಗೂ ಪ್ರದಾನ ಕಾರ್ಯದರ್ಶಿ ನಾಗಲಿಂಗಪ್ಪ ಐ.ಪತ್ತಾರ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಜಿಲ್ಲಾಧಿಕಾರಿಗಳ ಸೂಚನೆಯನ್ವಯ ಕಾರ್ಯಾಚರಣೆ ನಡೆಸಿದ ಪರಿಸರ ಇಲಾಖೆ ಅಧಿಕಾರಿಗಳು

## 40ಕ್ಕೂ ಹೆಚ್ಚು ಪಿಒಪಿ ಮೂರ್ತಿಗಳು ವಶಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ಜಿಲ್ಲೆಯಲ್ಲಿ ಪಿಓಪಿ ಗಣೇಶ ಮೂರ್ತಿಗಳ ಮಾರಾಟಕ್ಕೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ ಹಿನ್ನೆಲೆಯಲ್ಲಿ ಪರಿಸರ ಇಲಾಖೆ ಅಧಿಕಾರಿಗಳು ಗುರುವಾರ ಪಟ್ಟಣದಲ್ಲಿ ಗಣೇಶ ಮೂರ್ತಿ ತಯಾರಿಸುವ ಹಲವೆಡೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸುಮಾರು 35-40 ಮೂರ್ತಿಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ರಾಜ್ಯ ಸರಕಾರ ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಮಾರಾಟಕ್ಕೆ ಮಾತ್ರ ಪರವಾನಿಗೆ ಕೊಟ್ಟಿದ್ದು, ಕೆಲವೊಂದು ಕಡೆ ಪಿಓಪಿ ಗಣೇಶ ಮೂರ್ತಿಗಳನ್ನು ಮಾರಾಟ ಮಾಡಲಾಗುತ್ತಿದೆ ಎನ್ನುವ ಸುದ್ದಿಯ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿಯ ಯೋಜನಾ ಸಹಾಯಕ ವಿಕಾಸ ಪಟ್ಟಣಶೆಟ್ಟಿ ಪಟ್ಟಣಕ್ಕೆ ಭೇಟಿ ನೀಡಿ ಪರಿಶೀಲಿಸಿ ಮೂರ್ತಿಗಳನ್ನು ಜಪ್ತಿ ಮಾಡಿದ್ದು, ಅವುಗಳನ್ನು ಪುರಸಭೆಯವರು ವಾಹನದಲ್ಲಿ ಹೇರಿಕೊಂಡು ಪುರಸಭೆಯ ಆವರಣಕ್ಕೆ ಸಾಗಿಸಿದ್ದಾರೆ.

ಗುರುವಾರ ಪಟ್ಟಣದ ಹಾವಳಿ ಹನಮಂತ ದೇವಸ್ಥಾನ, ಪಂಪ ಸರ್ಕಲ್, ಕುಂಬಾರ ಓಣಿ ಸೇರಿದಂತೆ ಪಟ್ಟಣದಲ್ಲಿ ಗಣೇಶ ಮೂರ್ತಿ ಮಳಿಗೆಗಳಿಗೆ



ಭೇಟಿ ನೀಡಿ ಒಟ್ಟು 40ಕ್ಕೂ ಅಧಿಕ ಮೂರ್ತಿಗಳನ್ನು ಗುರುತಿಸಿ ಜಪ್ತಿ ಮಾಡಲಾಯಿತು. ಈ ವೇಳೆ ಕೆಲವು ಗಣೇಶನ ಮೂರ್ತಿ ತಯಾರಕರು ತಕರಾರು ತೆಗೆದು ಪಿಓಪಿ ಗಣೇಶನ ಮೂರ್ತಿಗಳನ್ನು ತಯಾರಿಸುವದು, ಮಾರಾಟ ಮಾಡುವದನ್ನು ನಿಷೇಧಿಸಿದ್ದು, ಇದೀಗ ಕ್ರಮಕ್ಕೆ ಮುಂದಾಗಿರುವದು ಯಾಕೆ ಎಂದು ಪ್ರಶ್ನಿಸಿದರಲ್ಲದೆ, 1-2 ತಿಂಗಳು ಮುಂಚಿತವಾಗಿಯೇ ಪಿಓಪಿ ಮಾರಾಟಕ್ಕೆ ನಿಷೇಧ ಮಾಡಲಾಗಿರುವದನ್ನು ಪ್ರಕಟಿಸಬಹುದಾಗಿತ್ತು. ಹೀಗೆ ಏಕಾಏಕಿ ಗಣೇಶನ ಮೂರ್ತಿಗಳನ್ನು ವಶಕ್ಕೆ ಪಡೆದುಕೊಳ್ಳುವದು ಯಾವ ನ್ಯಾಯ ಎಂದು ಪ್ರಶ್ನಿಸಿದರು. ಈ ವೇಳೆ ಮಾತನಾಡಿದ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಕಚೇರಿಯ ಯೋಜನಾ ಸಹಾಯಕ ವಿಕಾಸ ಪಟ್ಟಣಶೆಟ್ಟಿ, ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಪಿಓಪಿ ಗಣೇಶನ ಮೂರ್ತಿಗಳ ಮಾರಾಟ ನಿಷೇಧಿಸಲಾಗಿದೆ. ಈ ಹಿನ್ನೆಲೆಯಲ್ಲಿ ಲಕ್ಷ್ಮೇಶ್ವರದಲ್ಲಿ ಮಾರಾಟಕ್ಕೆ ಇರುವ ಗಣೇಶನ ಮೂರ್ತಿಗಳನ್ನು ಪರಿಶೀಲಿಸಲಾಗಿ ಸುಮಾರು 40ಕ್ಕೂ ಅಧಿಕ ಮೂರ್ತಿಗಳು ಪಿಓಪಿ ಹಾಗೂ ರೆಡ್‌ಆಕ್ಸೈಡ್ ಮಿಶ್ರಿತ/ಒಳಗಡೆ ಪಿಓಪಿ ಇರುವ ಮೂರ್ತಿಗಳು ಕಂಡುಬಂದಿವೆ. ಆದ್ದರಿಂದ ಅವುಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿದ್ದು, ಅವುಗಳನ್ನು ಪುರಸಭೆಯ ಗೋಡಾನ್‌ನಲ್ಲಿ ಇಡಲಾಗುವದು. ಮುಂದಿನ ಆದೇಶದಂತೆ ಅವುಗಳ ಬಗ್ಗೆ ಕ್ರಮ ವಹಿಸಲಾಗುವದು. ಮತ್ತೆ ಅಂತಹ ಗಣೇಶನ ಮೂರ್ತಿಗಳು ಕಂಡು ಬಂದರೆ ತಕ್ಷಣ ಕ್ರಮ ಕೈಗೊಳ್ಳಲಾಗುವದು ಎಂದು ತಿಳಿಸಿದರು.

ಈ ವೇಳೆ ಪುರಸಭೆ ಕಂದಾಯ ನಿರೀಕ್ಷಕರು, ಪುರಸಭೆ ಪೌರ ಕಾರ್ಮಿಕರು ಇದ್ದರು.

> ಪುರಸಭೆ ವ್ಯಾಪ್ತಿಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ಪಿಓಪಿ ಮೂರ್ತಿಗಳು ಮಾರಾಟಕ್ಕೆ ಬಂದಿದ್ದು, ಪುರಸಭೆ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕಾಗಿತ್ತು. ಇದೀಗ ಇಲಾಖೆ ಅಧಿಕಾರಿಗಳು ವಶಕ್ಕೆ ಪಡೆದ ಮೂರ್ತಿಗಳನ್ನು ಪುರಸಭೆಯವರು ಗೋಡಾನ್‌ನಲ್ಲಿ ಸಂಗ್ರಹಿಸಿ ಮುಂದಿನ ಕ್ರಮ ತೆಗೆದುಕೊಳ್ಳಬೇಕು.
>
> **- ಮುತ್ತಣ್ಣ ಭರಡಿ. ಜಿಲ್ಲಾ ಮಣ್ಣಿನ ಮೂರ್ತಿ ತಯಾರಕರ ಸಂಘದ ಅಧ್ಯಕ್ಷ.**

### ರೋಟರಿ ಗದಗ ಸೆಂಟ್ರಲ್‌ನಿಂದ ಕಲಿಕಾ ಸಾಮಗ್ರಿಗಳ ವಿತರಣೆ

## ಎಳೆಯರು ಯಾವಾಗಲೂ ಗೆಳೆಯರಾಗಿರಬೇಕು

■ವಿಜಯಸಾಕ್ಷಿ ಸುದ್ದಿ, ಗದಗ




ಶರಣರು ಎಂದರೆ ಅರಿವು ಮತ್ತು ಆಚಾರ ಒಂದಾದವರು. 12ನೇ ಶತಮಾನದ ಕಲ್ಯಾಣದಲ್ಲಿ ನೆಲೆನಿಂತ ಬಸವಾದಿ ಶಿವಶರಣರು ಮುಕ್ತವಾಗಿ ಅಭಿವ್ಯಕ್ತಿಗೊಳಿಸಿದ ನುಡಿಮುತ್ತುಗಳೇ ವಚನಗಳು ಎಂದು ರೋಟರಿ ಗದಗ ಸೆಂಟ್ರಲ್ ಕ್ಲಬ್ ಅಧ್ಯಕ್ಷ ಚೇತನ ಅಂಗಡಿ ಹೇಳಿದರು. ಅವರು ಬೆಟಗೇರಿಯ ರಂಗಾವಧೂತರ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.10ರಲ್ಲಿ ಗದಗ ಜಿಲ್ಲಾ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಜರುಗಿದ ಅಮೃತಭೋಜನ ಜ್ಞಾನಸಿಂಚನ ಮಾಲಿಕೆ-15ರಲ್ಲಿ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದರು.

ವಚನ ರಚನೆಯ ಮೂಲಕ ಲೋಕದ ಡೊಂಕನ್ನು ತಿದ್ದುವ ಕಾಯಕವನ್ನು ನಿಷ್ಠೆಯಿಂದ ಮಾಡಿ ಅಜರಾಮರರಾದವರು ಶರಣರು. ಇವರ ಸದ್ಭಾವನೆಯು ನಮಗೆ ಸದಾ ಆದರ್ಶ. ಎಳೆಯರು ಯಾವಾಗಲೂ ಗೆಳೆಯರಾಗಿರಬೇಕು. ಶರಣರು ಪರಿಸರ ಪ್ರೇಮಿಗಳು. ವೈಜ್ಞಾನಿಕ ಮನೋಭಾವ, ವೈಚಾರಿಕ ಚಿಂತನೆಗಳು ಇವರ ವಚನದಲ್ಲಿ ಕಂಡು ಬರುತ್ತವೆ. ಮಕ್ಕಳು ಪ್ರತಿನಿತ್ಯ ವಚಾನಾಮೃತವನ್ನು ರೂಢಿ ಮಾಡಬೇಕು. ಓದಿದ್ದನ್ನು ಮನನ ಮಾಡಿಕೊಂಡು ಹಿರಿಯರ ಮಾರ್ಗದರ್ಶನದಲ್ಲಿ ಮುನ್ನಡೆದು ಯಶಸ್ಸಿನ ಮೆಟ್ಟಿಲೇರಬೇಕು ಎಂದರು.

ಮಕ್ಕಳಿಗೆ ಅಮೃತ ಭೋಜನ ಉಣಬಡಿಸಿದ ಗಣ್ಯ ವರ್ತಕ ಮಂಜುನಾಥ ಬೇಲೇರಿ ಮಾತನಾಡಿ, ಸದ್ಭಾವನೆಗಳು ಸುಗಂಧ ಬೀರುವ ಹೂವುಗಳಂತೆ. ನಾವು ಶರಣರ ಬದುಕನ್ನು ಮಾದರಿಯಾಗಿ ಇಟ್ಟುಕೊಂಡು ಮುನ್ನಡೆಯಬೇಕು. ಸತ್ಯ, ಪ್ರಾಮಾಣಿಕತೆ ರೂಢಿಸಿಕೊಂಡಲ್ಲಿ ಸದ್ಭಾವನೆಯು ತಾನಾಗಿಯೇ ಒಡಮೂಡುತ್ತದೆ. ಪರಸ್ಪರ ಗೌರವ, ಮಾನವೀಯತೆಯ ಸಂಬಂಧಗಳು ಬೆಳೆಸಿಕೊಳ್ಳಲು ಮಕ್ಕಳು ಮುಂದಾಗಬೇಕು ಎಂದರು.

ಕ್ಲಬ್‌ನ ಖಜಾಂಚಿ ಡಾ. ಪ್ರಭು ಗಂಜಿಹಾಳ ಮಾತನಾಡಿ, ಪರಸ್ಪರ ನಾವು ಒಬ್ಬರಿಗೊಬ್ಬರು ಸ್ನೇಹ ಸಂಬಂಧದಿಂದ ಕೂಡಿ ಬೆಳೆಯಬೇಕು. ವಿದ್ಯಾರ್ಥಿ ಜೀವನ ಬಂಗಾರದ ಜೀವನವಿದ್ದಂತೆ. ಹಿರಿಯರ, ಶರಣರ ಜೀವನ ಚರಿತ್ರೆಗಳು ನಮ್ಮಲ್ಲಿ ಆದರ್ಶ ಮೌಲ್ಯಗಳನ್ನು ಬಿತ್ತುತ್ತವೆ. ನುಡಿದಂತೆ ನಡೆದ ಶರಣರು ಸದ್ಭಾವನೆಯ ಮೂರ್ತಿಗಳಾಗಿದ್ದಾರೆ. ಮಕ್ಕಳು ವಚನಗಳತ್ತ ತಮ್ಮ ಚಿತ್ತವ ಹರಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯ ಆರ್.ಎಲ್. ಹೂವಿನಹಳ್ಳಿ ಮಾತನಾಡಿ, ಉತ್ತಮ ಮೌಲ್ಯಗಳೊಂದಿಗೆ ಬಾಲ್ಯದಲ್ಲಿಯೇ ಮಾನವೀಯತೆಯೊಂದಿಗೆ ಬೆಳೆಯಬೇಕು. ಶರಣರು ವಚನಗಳ ಮೂಲಕ ಉತ್ತಮ ಸಂದೇಶಗಳನ್ನು ತಿಳಿಸಿದ್ದು, ಮಕ್ಕಳು ವಚನಗಳ ರೂಢಿಯನ್ನು ಮಾಡಿಕೊಳ್ಳಬೇಕು. ಗದುಗಿನ ಕದಳಿಶ್ರೀ ವೇದಿಕೆಯು ಶಾಲಾ ಮಕ್ಕಳಿಗೆ ಇಂತಹ ಕಾರ್ಯಕ್ರಮಗಳನ್ನು ಏರ್ಪಡಿಸುತ್ತಿರುವುದಕ್ಕೆ ಅಭಿನಂದಿಸಿದರು. ಪ್ರಾಯೋಜಕತ್ವವನ್ನು ರೋಟರಿ ಗದಗ ಸೆಂಟ್ರಲ್ ಹಾಗೂ ಸಾಮಾಜಿಕ ಕಾರ್ಯಕರ್ತರಾದ ರಮೇಶ ತೋಟದ ವಹಿಸಿಕೊಂಡಿದ್ದರು. ಮಕ್ಕಳು ಸಾಮೂಹಿಕವಾಗಿ ವಚನ ಪ್ರಾರ್ಥನೆಗೈದರು. ಎಚ್.ಬಿ. ಬಾಕಳೆ ಸ್ವಾಗತಿಸಿದರು. ಎಸ್.ಬಿ. ಮುಧೋಳಮಠ ನಿರೂಪಿಸಿದರು. ಜಿ.ಕೆ. ಹೂಗಾರ ಪರಿಚಯಿಸಿದರು. ಕವಿತಾ ಬೇಲೇರಿ ವಂದಿಸಿದರು. ಕಾರ್ಯಕ್ರಮದಲ್ಲಿ ಎಸ್.ಎಸ್. ಜಂತ್ಲಿ, ನಾಗವೇಣಿ ಮಾದಗುಂಡಿ, ಬಸಮ್ಮ ಕೋರಿ, ಸುವರ್ಣ ಹೊಸಮನಿ ಉಪಸ್ಥಿತರಿದ್ದರು.

> ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಲಬ್‌ನ ಮಾಜಿ ಅಧ್ಯಕ್ಷ ದಶರಥರಾಜ ಕೊಳ್ಳಿ, ವಚನಗಳು ಜಾತ್ಯಾತೀತ ಮನೋಭಾವನೆಗೆ ಹೆಚ್ಚು ಒತ್ತು ನೀಡಿವೆ. ಸಕಲ ಜೀವಾತ್ಮರ ಒಳಿತನ್ನೇ ಬಯಸುವ ಸದ್ಭಾವನೆಯ ಶಿಖರವೇ ನಮ್ಮ ವಚನಕಾರರು. ನಾವು ಕಾಯಕ ಯೋಗಿಗಳಾಗಬೇಕು. ವಿದ್ಯಾರ್ಥಿಗಳು ಉತ್ತಮ ಓದಿನೊಂದಿಗೆ ರಾಷ್ಟ್ರೀಯತೆ, ದೇಶಪ್ರೇಮ, ಸೌಹಾರ್ದತೆಯ ಗುಣಗಳನ್ನು ಬೆಳೆಸಿಕೊಳ್ಳಬೇಕು. ಸದಾಚಾರವೇ ನಮ್ಮನ್ನು ಸದ್ಭಾವರನ್ನಾಗಿಸುತ್ತದೆ ಎಂದರು.

## ಸಾಮೂಹಿಕ ವಿವಾಹಗಳ ಕರಪತ್ರ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದ ಪಟ್ಟಣದಲ್ಲಿ ಸೆಪ್ಟೆಂಬರ್ 14ರಂದು ನಡೆಯಲಿರುವ ಸಾಮೂಹಿಕ ವಿವಾಹಗಳ ಕರಪತ್ರ ಬಿಡುಗಡೆ ಮಾಡಲಾಯಿತು. ಅಂಜುಮನ ಆಡಳಿತ ಮಂಡಳಿ ಸದಸ್ಯರು ಹಾಗೂ ಖಿದ್ಮತ-ಎ-ಮಿಲ್ಲತ ಸದಸ್ಯರು ಸ್ಥಳೀಯ ದಾವಲಮಲ್ಲಿಕ ದರ್ಗಾದಲ್ಲಿ ಫಾತೀಹಾಖಾನಿ ಮಾಡಿ ಕರಪತ್ರ ಬಿಡುಗಡೆ ಮಾಡಿದರು.

ಅಂಜುಮನ ಅಧ್ಯಕ್ಷ ತಾಜುದ್ದೀನ ಕಿಂಡ್ರೀ ಮಾತನಾಡಿ, ಗುಲ್ಬರ್ಗದ ಹಜರತ ಖ್ವಾಜಾ ಬಂದೇನವಾಜ ವಂಶಸ್ಥರಾದ ಹಜರತ ಹಫೀಜ ಸೈಯದ ಮಹಮ್ಮದ ಅಲಿ ಅಲ್‌ಹುಸೇನ ಸಾಹೇಬ್ ಅವರ ಸಮ್ಮುಖದಲ್ಲಿ ಹಾಗೂ ಹೊಸಳ್ಳಿ ಬೂದೀಶ್ವರ ಮಹಾಸಂಸ್ಥಾನಮಠದ ಪ.ಪೂ. ಶ್ರೀ ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸುವರು.

ಕಾನೂನು, ಪ್ರವಾಸೋದ್ಯಮ, ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್.ಕೆ. ಪಾಟೀಲ ಅವರ ಘನ ಉಪಸ್ಥಿತಿಯಲ್ಲಿ ಈ ಸಾಮೂಹಿಕ ವಿವಾಹಗಳು ನಡೆಯಲಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಎ.ಡಿ. ಮುಜಾವರ, ಹೈದರ ಖವಾಸ, ಮುನ್ನಾ ಡಾಲಾಯತ, ಎಂ.ಎ. ಖಾಜಿ, ದಾವೂದ ಜಮಾಲ್, ದಾವಲಸಾಬ ಲಕ್ಷ್ಮೇಶ್ವರ, ರಾಜೇಸಾಬ ಸೈಯದಬಡೆ, ಇಮಾಮಹುಸೇನ ಮುಜಾವರ, ಮಾಬುಲಿ ದುರ್ಗಿಗುಡಿ, ಇಸಾಕ ಹೊಸಮನಿ, ಮೌಲಾಲಿ ಢಾಲಾಯತ, ಯೂಸುಫ್ ಮುಜಾವರ, ಮದಾರ ಕಲಕುಟ್ರಿ, ದಾವಲ ಲಾಡಸಾಬನವರ ಮುಂತಾದವರು ಹಾಜರಿದ್ದರು.

## ಹಿಂದೂ ಧಾರ್ಮಿಕ ಕೇಂದ್ರಗಳ ಮೇಲೆ ವಿಭಜಕ ಶಕ್ತಿಗಳ ವಕ್ರದೃಷ್ಟಿ

■ವಿಜಯಸಾಕ್ಷಿ ಸುದ್ದಿ, ಗದಗ



ಭಾರತ ದೇಶವನ್ನು ಹಿಂದೂ ಸಂಸ್ಕೃತಿಯಿಂದ ಬೇರ್ಪಡಿಸುವ ಹುನ್ನಾರ ಹೊಂದಿರುವ ವಿಭಜಕ ಶಕ್ತಿಗಳು ಸದ್ಯ ಧಾರ್ಮಿಕ ಕೇಂದ್ರಗಳ ಮೇಲೆ ತಮ್ಮ ವಕ್ರದೃಷ್ಟಿ ನೆಟ್ಟಿವೆ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಮೋಹನ ಮಾಳಶೆಟ್ಟಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇವಾಲಯಗಳು ನಮ್ಮ ಸಂಸ್ಕೃತಿಯ ಹೆಗ್ಗುರುತುಗಳಾಗಿದ್ದು, ನಮ್ಮ ಆಚಾರ-ವಿಚಾರ, ಸಂಪ್ರದಾಯಗಳನ್ನು ಒಳಗೊಂಡ ನಮ್ಮ ದೇಶದ ಅಸ್ಮಿತೆಗಳಾಗಿವೆ. ಬಹುಸಂಖ್ಯಾತ ಹಿಂದೂ ಸಮುದಾಯದ ಪಾಲಿಗೆ ದೇವಾಲಯಗಳು ಪವಿತ್ರ ಕ್ಷೇತ್ರಗಳಾದ ಕಾರಣ ಅವುಗಳ ಕುರಿತು ಜನರಲ್ಲಿ ಕೀಳರಿಮೆ ಹುಟ್ಟುವಂತೆ ಪ್ರಯತ್ನಗಳು ನಡೆಯುತ್ತಲೇ ಇವೆ. ಇಂಥಹ ಪಿತೂರಿಯ ಕುರಿತು ಜನರು ಜಾಗೃತರಾಗಬೇಕಿದೆ.

ಸದ್ಯ, ದಕ್ಷಿಣ ಕಾಶಿ ಎಂದೇ ಹೆಸರಾಗಿರುವ ಶ್ರೀಕ್ಷೇತ್ರ ಧರ್ಮಸ್ಥಳದ ಕೀರ್ತಿಗೆ ಮಸಿ ಬಳಿಯಲು ದೇಶದ್ರೋಹಿಗಳು ಶತಪ್ರಯತ್ನ ನಡೆಸಿದ್ದು, ಯಾವುದೇ ಸಾಕ್ಷಿ-ಆಧಾರಗಳಿಲ್ಲದಿದ್ದರೂ ಸರಣಿ ಕೊಲೆ, ಅತ್ಯಾಚಾರ ಎಂದು ಕಟ್ಟುಕಥೆಗಳನ್ನು ಹರಿಬಿಟ್ಟು ಭಕ್ತರ ಧಾರ್ಮಿಕ ಭಾವನೆಗೆ ಧಕ್ಕೆ ತಂದಿದ್ದಾರೆ. ಕಾಂಗ್ರೆಸ್ ಸರ್ಕಾರ ತರಾತುರಿಯಲ್ಲಿ ಈ ಪ್ರಕರಣವನ್ನು ಎಸ್.ಐ.ಟಿಗೆ ಒಪ್ಪಿಸಿ ಸದ್ಯ ಮುಖಭಂಗಕ್ಕೆ ಒಳಗಾಗಿದೆ. ಸತತ ತನಿಖೆ ಬಳಿಕ ಅಲ್ಲಿ ಯಾವುದೇ ಸಾಕ್ಷಿ ಪುರಾವೆ ಸಿಗದಿದ್ದರೂ ತಪ್ಪು ಮಾಹಿತಿ ನೀಡಿದವರ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಯಾಕೆ ಸಾಧ್ಯವಾಗುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ.

ಸಾವಿರಾರು ವರ್ಷಗಳ ಇತಿಹಾಸವಿರುವ ನಮ್ಮ ಧಾರ್ಮಿಕ ಆಚರಣೆಗಳನ್ನು ಅಳಿಸಿಹಾಕುವ ಮೂಲಕ ಇಲ್ಲಿನ ಜನರ ಮೇಲೆ ಸವಾರಿ ಮಾಡಬಹುದು ಎನ್ನುವುದು ಕಮ್ಯುನಿಸ್ಟರ ಧ್ಯೇಯವಾಗಿದೆ. ಹಿಂದೂ ಸಮಾಜ ಎಚ್ಚೆತ್ತುಕೊಳ್ಳುವ ಕಾಲ ಇದಾಗಿದ್ದು, ನಮ್ಮ ಪರಂಪರೆಯ ಶ್ರೇಷ್ಠತೆಗೆ ಭಂಗ ತರುತ್ತಿರುವವರ ವಿರುದ್ಧ ಧ್ವನಿ ಎತ್ತಿ ಅವರಿಗೆ ತಕ್ಕ ಶಾಸ್ತಿ ಮಾಡಬೇಕಿದೆ ಎಂದು ತಿಳಿಸಿದ್ದಾರೆ.

## ದಲಿತ, ಅಲೆಮಾರಿ ಸಮುದಾಯಗಳಿಗೆ ಅನ್ಯಾಯ

■ವಿಜಯಸಾಕ್ಷಿ ಸುದ್ದಿ, 000

ವಿಜಯಸಾಕ್ಷಿ ಸುದ್ದಿ, ಗದಗ




ಒಳ ಮೀಸಲಾತಿ ಜಾರಿ ನಿರ್ಧಾರವು ಕೇವಲ ತಾತ್ಕಾಲಿಕ ಪರಿಹಾರವಾಗಿದ್ದು, ಶೇ.50ರಷ್ಟು ಮೀರಬಾರದು. ಈ ವಿಷಯದಲ್ಲಿ ಸರ್ಕಾರ ಗಮನ ನೀಡಬೇಕು ಎಂದು ದಲಿತ ಮುಖಂಡ ಮೋಹನದಾಸ ಅಲಮೇಲಕರ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಗಮೋಹನದಾಸ್ ಕಮಿಟಿ ವರದಿಯನ್ನು ಸಮರ್ಪಕವಾಗಿ ಜಾರಿಗೊಳಿಸದೆ ಸರ್ಕಾರ ಸಣ್ಣ, ದಲಿತ ಮತ್ತು ಅಲೆಮಾರಿ ಸಮುದಾಯಗಳಿಗೆ ಅನ್ಯಾಯ ಮಾಡಿದೆ. ಪ್ರಸ್ತುತ ಒಳ ಮೀಸಲಾತಿ ಹಂಚಿಕೆಯಿಂದಾಗಿ ಒಟ್ಟು ಮೀಸಲಾತಿ ಪ್ರಮಾಣ ಶೇ.50ರ ಗಡಿ ದಾಟಿದೆ. ಇದು ಸುಪ್ರೀಂ ಕೋರ್ಟ್‌ನಲ್ಲಿ ಕಾನೂನು ಸವಾಲುಗಳಿಗೆ ಕಾರಣವಾಗಬಹುದು ಎಂದರು.

ಇತರ ಸಮುದಾಯಗಳು ಇದನ್ನು ಪ್ರಶ್ನಿಸಿ ನ್ಯಾಯಾಲಯಕ್ಕೆ ಹೋದರೆ, ಈ ಸಂಪೂರ್ಣ ಪ್ರಕ್ರಿಯೆ ಮತ್ತೆ ಗೊಂದಲಮಯವಾಗಬಹುದು. ಆದ್ದರಿಂದ, ಸರ್ಕಾರ ಕೂಡಲೇ ಈ ಸಮಸ್ಯೆಯನ್ನು ಸರಿಪಡಿಸಿ ಕಾನೂನು ತೊಡಕುಗಳಿಗೆ ಅವಕಾಶ ನೀಡಬಾರದು ಎಂದು ಆಗ್ರಹಿಸಿದರು.

ದಲಿತ ಮುಖಂಡ ಮಂಜು ಬುರುಡಿ ಮಾತನಾಡಿ, ಮಾದಿಗ ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ ಕನಿಷ್ಠ ಶೇ.7ರಷ್ಟು ಮೀಸಲಾತಿ ಸಿಗಬೇಕಿತ್ತು. ಆದರೆ ರಾಜ್ಯ ಸರ್ಕಾರ ನಮ್ಮ ಸಮುದಾಯಕ್ಕೆ ಕೇವಲ ಶೇ.6 ಮೀಸಲಾತಿ ನೀಡಿ ದೊಡ್ಡ ಅನ್ಯಾಯ ಮಾಡಿದೆ ಎಂದರು.

ಮುಖಂಡರಾದ ಅಶೋಕ ಕುಡತಿನ್ನಿ, ಚಂದ್ರು ಹರಿಜನ, ಉಡಚಪ್ಪ ಹಳ್ಳಿಕೇರಿ, ಸತೀಶ ಪಾಸಿ, ಡಿ.ಜಿ. ಕಟ್ಟಿಮನಿ, ಬಸವರಾಜ ಮುಳ್ಳಾಳ, ನಿಂಗಪ್ಪ ದೊಡ್ಡಮನಿ, ಮಂಜುನಾಥ ಗಜಾಕೋಶ, ಗಣೇಶ ಹುಬ್ಬಳ್ಳಿ, ರಾಘವೇಂದ್ರ ಪರಾಪೂರ, ಪುಂಡಲೀಕ ಕಲ್ಮನಿ, ಶೇಖಪ್ಪ ಮಾದರ, ಶಿವು ಪೂಜಾರ, ಮರಿಯಪ್ಪ ಮುಂತಾದವರು ಉಪಸ್ಥಿತರಿದ್ದರು.

**ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ**
**ತಾ: ಜಿ: ಗದಗ**

ಸಂ:ಪಪಂಮು/ತಾಂ.ವಿ./ಎಸ್.ಎಫ್.ಸಿ.ಪ.ಪಂ.ನಿ&.15 ಹಣಕಾಸು/ಟೆಂಡರ/ವಹಿ- /2025-26 ದಿನಾಂಕ: 20-08-2025

**ಅಲ್ಪಾವಧಿ ಟೆಂಡರ್ ಪ್ರಕಟಣೆ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಮೂಲಕ**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರಿಂದ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ-2000ರ ಪ್ರಕಾರ "ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್" ಪದ್ಧತಿಯಲ್ಲಿ ಸನ್. 2025-26ನೇ ಸಾಲಿನ ಎಸ್.ಎಫ್.ಸಿ./ಪಂ.ಪಂ.ನಿಧಿ ಮತ್ತು 15ನೇ ಹಣಕಾಸು ಅನುದಾನದಡಿ ಇಂಡೆಂಟ್ ನಂಬರಗಳ ಸಂಖ್ಯೆಗಳು: 38610 CAT-1, 42319-ST, 46901-SC, 46912, 46939, 46955, 47477, 46979-SC, 46985-IIA, 46991, 47458 ಮತ್ತು 47462, ನೇದ್ದರ ಕಾಮಗಾರಿಗಳ ನಿರ್ವಹಣೆಗಾಗಿ ಕೆ.ಡಬ್ಲ್ಯೂ 1/2/3 ದಸ್ತಾವೇಜನಲ್ಲಿ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಚಾಲ್ತಿ ಸಾಲಿನ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇ-ಪ್ರೊಕ್ಯೂರ್‌ಮೆಂಟ್ ದಾಖಲೆಗಳಿಗಾಗಿ http://kppp.karnataka.gov.in ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವದು.

(1) ಇ-ಪ್ರೊಕ್ಯೂರ್‌ಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 28-08-2025** ಸಂಜೆ:4.00 ಗಂಟೆಗೆ (2) ಇ-ಪ್ರೊಕ್ಯೂರ್‌ಮೆಂಟ್ ಪದ್ಧತಿಯಲ್ಲಿ ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 29-08-2025** ಸಂಜೆ: **4:30** ಗಂಟೆಗೆ **(3)** ಇ-ಪ್ರೊಕ್ಯೂರ್‌ಮೆಂಟ್ ಪದ್ಧತಿಯಲ್ಲಿ ಆರ್ಥಿಕ ಬಿಡ್ ತೆರೆಯುವ **ದಿನಾಂಕ: 30-08-2025** ಸಂಜೆ: **4:00** ಗಂಟೆಗೆ ನಿಗಧಿ ಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವದು. ಯಾವುದೇ ತಿದ್ದುಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಚೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ ಕಾಮಗಾರಿ ಇ.ಎಂ.ಡಿ. ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಚೇರಿಯ ವೆಬ್‌ಸೈಟ್ http://www.mulagundatown.mrc.gov.in ಹಾಗೂ ಕಚೇರಿ ವೇಳೆಯಲ್ಲಿ ಸಂಭಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ-ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ. ಹಾಗೂ ಟೆಂಡರ್ ಮಂಜೂರ ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/- (ಶ್ರೀ.ಮಂಜುನಾಥ ಪಿ ಗುಳೇದ)** **ಸಹಿ/- (ಶ್ರೀಮತಿ.ಯಲ್ಲವ್ವ ಕೋಂ.ಬ ಕವಲೂರ)**
**ಮುಖ್ಯಾಧಿಕಾರಿ** **ಅಧ್ಯಕ್ಷರು**
**ಪಟ್ಟಣ ಪಂಚಾಯತ ಮುಳಗುಂದ** **ಪಟ್ಟಣ ಪಂಚಾಯತ ಮುಳಗುಂದ**

ವಾ.ಸಾ.ಇ/ಗದಗ/251/ದೇಶಪಾಂಡೆಪಬ್ಲಿಸಿಟಿ/2025-26

## ತಾತ್ಕಾಲಿಕ ಪಟ್ಟಣ ಮಾರಾಟ ಸಮಿತಿ ರಚನೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ರಚಿಸಲಾಗಿರುವ ಪಟ್ಟಣ ಮಾರಾಟ ಸಮಿತಿಗಳ ಅಧಿಕಾರವಧಿಯು ನವೆಂಬರ್-2024 ಮಾಹೆಯ ಅಂತ್ಯಕ್ಕೆ ಕೊನೆಗೊಂಡಿದೆ. ಆದ್ದರಿಂದ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ಬೀದಿ ಬದಿ ವ್ಯಾಪಾರ ನಿಯಂತ್ರಣ) ನಿಯಮಗಳು-2019ರ ಅಧ್ಯಾಯ-ಖರ ಉಪನಿಯಮ 4(1) (2) ಮತ್ತು (3)ರಲ್ಲಿ ತಿಳಿಸಿರುವಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ಪೂರ್ಣಗೊಂಡು ಪಟ್ಟಣ ವ್ಯಾಪಾರ ಸಮಿತಿಗೆ ಚುನಾವಣೆ ನಡೆಸುವವರೆಗೆ ತಾತ್ಕಾಲಿಕ ಪಟ್ಟಣ ಮಾರಾಟ ಸಮಿತಿಯನ್ನು ರಚಿಸುವ ಸಂಬಂಧ ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಸದಸ್ಯರ ಸ್ಥಾನಕ್ಕಾಗಿ ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ.

ನಗರದ ವ್ಯಾಪ್ತಿಯೊಳಗೆ ಕನಿಷ್ಠ 5 ವರ್ಷಗಳಿಂದ ಬೀದಿ ಬದಿ ವ್ಯಾಪಾರದಲ್ಲಿ ತೊಡಗಿದ್ದು ಈಗಾಗಲೇ ನಗರದಲ್ಲಿ ಕಾರ್ಯಾಚರಿಸುತ್ತಿರುವ ರಾಜಕೀಯ ರಹಿತ ಬೀದಿ ಬದಿ ವ್ಯಾಪಾರಸ್ಥರ ಸಂಘ ಅಥವಾ ಒಕ್ಕೂಟದ ಸದಸ್ಯರುಗಳಿಂದ ಮಿಸಲಾತಿಯ ಪ್ರಕಾರ ಸಾಮಾನ್ಯ-1, ಹಿಂದೂಳಿದ ವರ್ಗ-1, ಪರಿಶಿಷ್ಟ ಜಾತಿ-1, ಪರಿಶಿಷ್ಟ ಪಂಗಡ-1, ಅಲ್ಪ ಸಂಖ್ಯಾತರು-02, ಮಹಿಳೆ-03 ಮತ್ತು ಅಂಗವಿಕಲರು-1, ಕೇಂದ್ರ ಸರಕಾರದ ಪುರಸ್ಕೃತ ಡೇ-ನಲ್ಮ್ ಯೋಜನೆಯ ಅಡಿಯಲ್ಲಿ ಸ್ಥಾಪಿತಗೊಂಡಿರುವ ಮಹಿಳಾ ಎಸ್‌ಹೆಚ್‌ಜಿ/ಎಎಲ್ಎಫ್ ಸದಸ್ಯರು, ಕನಿಷ್ಠ 5 ವರ್ಷಗಳಿಂದ ಸಮಾಜ ಸೇವೆಯಲ್ಲಿ ಕಾರ್ಯಾಚರಿಸುತ್ತಿರುವ ಸರಕಾರೇತರ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ ಬೀದಿ ಬದಿ ವ್ಯಾಪಾರಿಗಳೊಂದಿಗೆ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಿಗೆ ಆದ್ಯತೆ ನೀಡಲಾಗುವುದು.

ಕನಿಷ್ಟ 5 ವರ್ಷಗಳಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ನಗರ ವ್ಯಾಪಿಯೊಳಗಡೆಯ ಸಮಾಜ ಕಾರ್ಯಕರ್ತರು/ಸೇವಕರು, ಟ್ರೇಡ್ ಯುನಿಯನ್ ಪ್ರತಿನಿಧಿ, ಹೋಟೆಲ್ ಮಾಲೀಕರ ಸಂಘದ ಪ್ರತಿನಿಧಿ, ಮಾರುಕಟ್ಟೆ ಅಥವಾ ವ್ಯಾಪರಸ್ಥರ ಸಂಘಟನೆಯ ಪ್ರತಿನಿಧಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸುವ ಬೀದಿ ಬದಿ ವ್ಯಾಪಾರಸ್ಥರು ಆಧಾರ್ ಕಾರ್ಡ್ ಪ್ರತಿ, ಜಾತಿ/ಆದಾಯ ಪ್ರಮಾಣ ಪತ್ರ ಪ್ರತಿ, ಪಾಸ್‌ಪೋರ್ಟ್‌ಟಳತೆಯ 2 ಫೋಟೋ, ಬೀದಿ ವ್ಯಾಪಾರಸ್ಥರ ಗುರುತಿನ ಚೀಟಿ ಸಲ್ಲಿಸಬೇಕು.

05-09-2025ರ ಸಂಜೆ 5 ಗಂಟೆಯೊಳಗಾಗಿ ಮೇಲೆ ತಿಳಿಸಿದ ದಾಖಲಾತಿಗಳೊಂದಿಗೆ ಸ್ವಯಂ ಲಿಖಿತವಾಗಿ ಅರ್ಜಿಗಳನ್ನು ಸಮುದಾಯ ಸಂಘಟನಾಧಿಕಾರಿ/ಸಮುದಾಯ ಸಂಘಟಕರು ಡೇ-ನಲ್ಮ್ ವಿಭಾಗದಲ್ಲಿ ಖುದ್ದಾಗಿ ಸಲ್ಲಿಸಬೇಕೆಂದು ಕೋರಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka